# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 02 ಸಂಚಿಕೆ – 112 | ಆರ್‌ಎನ್‌ಐ ನಂ: ಕೆಎಆರ್‌ಕೆಎಎನ್/2023/88462 | ಚಿತ್ರದುರ್ಗ | ದಿನಾಂಕ: 18–11–2024 ಸೋಮವಾರ | ಪುಟ: 4 | ಬೆಲೆ : ರೂ.2–00
Volume - 02 Issue - 112 | RNI No: KARKAN/2023/88462 | Chitradurga | Date: 18-11-2024 Monday | Page: 4 | Price: Rs. 2-00



**ಒಳಪುಟದ ಸುದ್ದಿಗಳು**

ನ.19ರಿಂದ ನಮ್ಮ ಶೌಚಾಲಯ–ನಮ್ಮ ಗೌರವ ವಿಶೇಷ ಆಂದೋಲನ 2

ಅತ್ಯುತ್ತಮ ಸಹಕಾರ ಬ್ಯಾಂಕ್ ಪ್ರಶಸ್ತಿ ಮುಡಿಗೇರಿಸಿಕೊಂಡ ಮರ್ಚೆಂಟ್ಸ್ ಬ್ಯಾಂಕ್ 3

ಮತದಾರರ ಪಟ್ಟಿ ವಿಶೇಷ ಪರಿಷ್ಕರಣೆ, ನ.28 ರವರೆಗೆ ವರ್ಗಾವಣೆಗೆ ಅವಕಾಶ 4



ಸುದ್ದಿ, ಜಾಹಿರಾತಿಗೆ 9686622252


# ಕೋಟೆ ಜಾಗಕ್ಕೆ ಕಾಂಪೌಂಡ್ ಹಾಕಿದ ಶ್ರೀನಿವಾಸ್ ಕುಟುಂಬಕ್ಕೆ ನನ್ನ ಪ್ರಶ್ನಿಸುವ ನೈತಿಕತೆ ಇಲ್ಲ: ದೀಪು

» ನಮ್ಮಜನ.ಕಾಂ, ಚಿತ್ರದುರ್ಗ

ಮುಕ್ತಿಧಾಮ ಚಿತಾಗಾರದಿಂದ ಸ್ವಲ್ಪ ಮುಂದಿನ ಕೋಟೆಗೆ ಸೇರಿದ ಒಂದನೇ ಬಾಗಿಲು ಮತ್ತು ಎರಡನೇ ಬಾಗಿಲು ಸೇರಿಸಿ ಖಾಲಿ ಜಾಗಕ್ಕೆ ನಗರಸಭೆ ಸದಸ್ಯ ಶ್ರೀನಿವಾಸ್ ಅವರ ಸಂಬಂಧಿ ಹೆಸರಿಗೆ ಪಹಣಿ ಮಾಡಿಸಿಕೊಂಡದ್ದಾರೆ ಭೂಮಿ ಕಬಳಿಸಿದ್ದಾರೆ ಎಂದು ನಗರಸಭೆ ಸದಸ್ಯ ದೀಪು ಅವರು ಆರೋಪಿಸಿದರು.

ಕೋಟೆಗೆ ಸೇರಿದ ಜಾಗ ಒತ್ತುವರಿ ಮಾಡಿರುವ ಸ್ಥಳದಲ್ಲಿ ಭಾನುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು ಕೋಟೆಗೆ ಸಂಬಂಧಿಸಿದಂತೆ ಎಲ್ಲಾ ಕುರುವುಗಳು ಇರುವ ಜಾಗವನ್ನು ಹೇಗೆ ಅವರು ತಮ್ಮ ಹೆಸರಿಗೆ ಮಾಡಿಸಿಕೊಂಡರು ಎಂಬದು ಬಯಲಿಗೆ ಬರಬೇಕು ಎಂದು ಆಗ್ರಹಿಸಿದರು.

ಕೋಟೆ ಬಳಿಯ ನಾಲ್ಕು ಎಕರೆ ಕೋಟೆ ಜಾಗವನ್ನು ರಾಮಮೂರ್ತಿ ಹೆಸರಿಗೆ ಮಾಡಿಸಿಕೊಟ್ಟಿರುವ ಶ್ರೀನಿವಾಸ್ ಹಾಗೂ ಭಾಸ್ಕರ್ ಇವರುಗಳಿಗೆ ನಗರಸಭೆ ಜಾಗವನ್ನು ಕಬಳಿಸಲು ಹೊರಟಿದ್ದೇನೆಂದು ನನ್ನ ಮೇಲೆ ಸುಳ್ಳು ಆರೋಪ ಮಾಡುತ್ತಿದ್ದು ನನ್ನ ಹೆಸರಿಗೆ ನಗರಸಭೆ ಒಂದು ಜಾಗ ಒಡೆದುಕೊಂಡಿದ್ದೇನೆ ಎಂದು ಸಾಬೀತುಪಡಿಸಲಿ ಎಂದು ಶ್ರೀನಿವಾಸ್ ಗೆ ಸವಾಲು ಹಾಕುವ ಜೊತೆಗೆ ಶ್ರೀನಿವಾಸ್ ನನ್ನ ಪ್ರಶ್ನಿಸಲು ಯಾವುದೇ ನೈತಿಕತೆ ಇಲ್ಲ ಕುಟುಕಿದರು.





### ಧವಳಗಿರಿ ಮತ್ತು ನೀಲಕಂಠೇಶ್ವರ ದೇವಸ್ಥಾನ ಬಳಿ ಅಕ್ರಮ ಕಟ್ಟಡ ನಿರ್ಮಾಣ

ಚಳ್ಳಕೆರೆ ಗೇಟ್ ಬಳಿಯ ಆದಿಶಕ್ತಿ ನಗರದ ಮೇಲೆ ಮಾತ್ರ ಕಣ್ಣು ಬಿದ್ದಿದೆ. ಚಿತ್ರದುರ್ಗ ನಗರದ ಕನಕವೃತ್ತ ಬಳಿ ಕಟ್ಟಡ ಕಟ್ಟಿ ಖಾತೆ ಸಹಮಾಡಿಕೊಂಡಿದ್ದು ಬಿಜೆಪಿ ಅವಧಿಯಲ್ಲಿ ಆಗ ಇವರು ಏನು ಮಾಡುತ್ತಿದ್ದರು ಎಲ್ಲಿ ಹೋಗಿದ್ದರು ಎಂದು ಪ್ರಶ್ನಿಸಿದರು. ಆದಿಶಕ್ತಿ ನಗರದ ಗುಜರಿ ಅಂಗಡಿ ಜಾಗ ಸಹ ನಗರಸಭೆಗೆ ಸೇರಿದ್ದು ಅಲ್ಲಿ ಬೋರ್ಡ್ ಹಾಕಲು ನನ್ನ ಆಕ್ಷೇಪವಿಲ್ಲ. ಆದರೆ ಇನ್ನೂ ಕೊಟ್ಯಾಂತರ ರೂಪಾಯಿ ಜಾಗ ಒತ್ತವರಿ ತೆರವುಗೊಳಿಸಲು ಸಹ ಇಷ್ಟೆ ಕಾಳಜಿ ವಹಿಸಬೇಕು ಎಂದು ಒತ್ತಾಯಿಸಿದರು.

### ಜಿಲ್ಲಾಧಿಕಾರಿ, ಜಿಲ್ಲಾ ಪೋಲಿಸ್ ವರಿಷ್ಠಾಧಿಕಾರಿ, ಲೋಕಯುಕ್ತಕ್ಕೆ ದೂರು

ಕೋಟೆ ಜಾಗ ಒತ್ತುವರಿ ಮಾಡಿಕೊಂಡಿರುವ ಇವರುಗಳ ವಿರುದ್ಧ ಜಿಲ್ಲಾಧಿಕಾರಿ ಹಾಗೂ ಪೊಲೀಸ್ ಇಲಾಖೆ, ಲೋಕಯುಕ್ತಕ್ಕೆ ದೂರು ಕೊಡುವುದರ ಜೊತೆ ಬೃಹತ್ ಹೋರಾಟ ಸಹ ಮಾಡಲು ನಿರ್ಧಾರ ಮಾಡಿದ್ದು ಮುಂದಿನ ದಿನದಲ್ಲಿ ಕಾನೂನು ಹೋರಾಟ ಮಾಡುತ್ತೇವೆ ಎಂದು ತಿಳಿಸಿದರು.

### ತಾಕತ್ ಇದ್ದರೆ ಮಾಜಿ ನಗರಸಭೆ ಅಧ್ಯಕ್ಷನ ಹೆಸರು ಬಹಿರಂಗಪಡಿಸಿ

ಮಾಜಿ ಅಧ್ಯಕ್ಷ ಅಕ್ರಮವಾಗಿ ನಗರಸಭೆ ಜಾಗಗಳನ್ನು ಒತ್ತುವರಿ ಮಾಡಿಕೊಂಡು ಮಾರಟ ಮಾಡುತ್ತಾರೆ ಎಂದು ಆರೋಪಸಿದ್ದು ತಾಕತ್ ಇದ್ದರೆ ಯಾವ ಅಧ್ಯಕ್ಷ ಮಾಜಿ ಅಧ್ಯಕ್ಷರು ಎಂದು ಹೆಸರು ಬಹಿರಂಗಪಡಿಸಲಿ ಎಂದು ಸವಾಲು ಹಾಕಿದರು.

### ಶಿಕ್ಷಣ ಸಂಸ್ಥೆಗಳ ಕಟ್ಟಡಗಳಿಗೆ ಕಂದಾಯ ಪಾವತಿಸಿಲ್ಲ

ಕೋಟೆ ಮುಂಭಾಗ ಬೃಹತ್ ಕಟ್ಟಡಗಳನ್ನು ಕಟ್ಟಿಕೊಂಡು ಶಿಕ್ಷಣ ಸಂಸ್ಥೆ ನಡೆಸುತ್ತಿರುವ ಶ್ರೀನಿವಾಸ್ ಮತ್ತು ಭಾಸ್ಕರ್ ಇವರುಗಳು ನಗರಸಭೆಗೆ ಕಂದಾಯ ಪಾವತಿಸುತ್ತಿಲ್ಲ. ಕಟ್ಟಡ ಕಟ್ಟುವಾಗಲೂ ನಗರಸಭೆಯಿಂದ ಲೈಸೆನ್ಸ್ ಪಡೆದಿಲ್ಲ. ಅಧಿಕಾರ ದುರುಪಯೋಗಪಡಿಸಿಕೊಂಡು ಕೋಟೆ ಜಾಗವನ್ನು ಈಗ ಒತ್ತುವರಿ ಮಾಡಿದ್ದಾರೆ.ಪುರಾತತ್ವ ಇಲಾಖೆಯ ನಿಯಮ ಉಲ್ಲಂಘಿಸಿ ಕೋಟೆ ಎದುರುಗಡೆ ದೊಡ್ಡ ದೊಡ್ಡ ಕಟ್ಟಡಗಳನ್ನು ಕಟ್ಟಿಕೊಂಡಿದ್ದಾರೆ. ಕೋಟೆ ಜಾಗ ಒತ್ತುವರಿಯಾಗಿರುವುದನ್ನು ಉಳಿಸುವುದಕ್ಕಾಗಿ ಈಗಿನಿಂದ ನಮ್ಮ ಹೋರಾಟ ಶುರುವಾಗಲಿದೆ ಎಂದು ದೀಪು ತಮ್ಮ ಮೇಲೆ ಆಪಾದನೆ ಮಾಡಿರುವವರಿಗೆ ತಿರುಗೇಟು ನೀಡಿದರು.


### ಆಣೆ ಪ್ರಮಾಣಕ್ಕೆ ಉಚ್ಚಂಗೆಲ್ಲಮ್ಮ ದೇವಸ್ಥಾನಕ್ಕೆ ಬನ್ನಿ

ನಗರಸಭೆ ಆಸ್ತಿ ನಾನು ಯಾವುದು ಅಕ್ರಮವಾಗಿ ಮಾರಟ ಮಾಡಿಲ್ಲ ಮತ್ತು ನಗರಸಭೆಯಲ್ಲಿ ಒಂದು ರೂಪಾಯಿ ತಿಂದಿಲ್ಲ ಎಂದು ನಾನು ಪ್ರಮಾಣ ಮಾಡುತ್ತೇನೆ. ಅವರು ಸಹ ನಾನು ಕ್ಲಿನ್ ಯಾವುದೇ ಒಂದು ರೂಪಾಯಿ ಸಾರ್ವಜನಿಕ ಹಣ ತಿಂದಿಲ್ಲ, ಮಾರಟ ಮಾಡಿಲ್ಲ ಎಂದು ಪ್ರಮಾಣ ಮಾಡಲಿ ಎಂದು ಶ್ರೀನಿವಾಸ್ ಅವರನ್ನು ದೇವಸ್ಥಾನಕ್ಕೆ ಆಹ್ವಾನಿಸಿದರು. ಈ ಸಂದರ್ಭದಲ್ಲಿ ನಗರಸಭೆ ಮಾಜಿ ಸದಸ್ಯ ವಿಜಯಕುಮಾರ್ ಪತ್ರಿಕಾಗೋಷ್ಠಿಯಲ್ಲಿ ಹಾಜರಿದ್ದರು.



ಚಿತ್ರದುರ್ಗ ನಗರದ ಕೆ.ಎಸ್.ಆರ್.ಟಿ.ಸಿ ಘಟಕದಲ್ಲಿ ಶುಕ್ರವಾರ ಸರಳವಾಗಿ ವಾಲ್ಮೀಕಿ ಜಯಂತಿಯನ್ನು ಆಚರಿಸಲಾಯಿತು. ಕಾರ್ಯಕ್ರಮದಲ್ಲಿ ವಿಭಾಗೀಯ ನಿಯಂತ್ರಣಾಧಿಕಾರಿ ಶ್ರೀನಿವಾಸಮೂರ್ತಿ, ವಿಭಾಗೀಯ ಅಧಿಕಾರಿ ಸುರೇಶ್, ಉದ್ಯೋಗ ವಿನಿಮಯ ಕೇಂದ್ರದ ನಿರಂಜನ್ ಮೂರ್ತಿ, ಕಾನೂನು ಸಲಹೆಗಾರ ಲಕ್ಷ್ಮೀ ನಾರಾಯಣ ಭಟ್, ಸಹಾಯಕ ಲೆಕ್ಕಾಧಿಕಾರಿ ಚೇತನ, ಚಂದ್ರಶೇಖರ್, ಡಿವೈಎಸ್‌ಪಿ ಗಣೇಶ್, ಚನ್ನಬಸಪ್ಪ, ಜ್ಞಾನಮೂರ್ತಿ ಸೇರಿದಂತೆ ಘಟಕದ ವಾಲ್ಮೀಕಿ ಸಮಾಜದ ಪದಾಧಿಕಾರಿಗಳು ಮತ್ತು ನೌಕರರು ಇದ್ದರು.

## ಗ್ಯಾರಂಟಿ ಅರ್ಹ ಫಲಾನುಭವಿಗಳಿಗೆ ಸಿಗುವಂತಾಗಬೇಕು: ಗೋವಿಂದಪ್ಪ



» ಹೊಸದುರ್ಗ

ಮುಖ್ಯಮಂತ್ರಿ ಸಿದ್ಧರಾಮಯ್ಯ ನೇತೃತ್ವದ ಸರ್ಕಾರ ಅಧಿಕಾರಕ್ಕೆ ಬಂದ ಕೆಲವೇ ತಿಂಗಳಲ್ಲಿ ಪಂಚ ಗ್ಯಾರಂಟಿ ಯೋಜನೆ ಅನುಷ್ಠಾನಗೊಳಿಸುವ ಮೂಲಕ ಜನರಿಗೆ ಕೊಟ್ಟ ಮಾತನ್ನು ಉಳಿಸಿಕೊಂಡಿದೆ ಎಂದು ಶಾಸಕ ಬಿ. ಜಿ. ಗೋವಿಂದಪ್ಪ ತಿಳಿದರು.


ಪುಟ 2


**ಪ್ರಮುಖ ಸುದ್ದಿ**

71ನೇ ಅಖಿಲಭಾರತ ಸಹಕಾರಿ ಸಪ್ತಾಹ

# ಸಹಕಾರಿ ಬಂಧುಗಳ ಸಹಕಾರ, ಕ್ರಿಯಾಶೀಲತೆಯಿಂದ ಸಹಕಾರಿ ಕ್ಷೇತ್ರ ಅಭಿವೃದ್ಧಿ: ಶಾಸಕ ಟಿ.ರಘುಮೂರ್ತಿ

» ಚಳ್ಳಕೆರೆ

ಸಹಕಾರ ಕ್ಷೇತ್ರದ ಸರ್ವತೋಮುಖ ಅಭಿವೃದ್ಧಿಗೆ ಎಲ್ಲಾ ಸಹಕಾರಿ ಬಂಧುಗಳ ಪ್ರಾಮಾಣಿಕ ದುಡಿಮೆ ಮತ್ತು ಸೇವೆಯೇ ಕಾರಣವಾಗುತ್ತದೆ ಎಂದು ಕ್ಷೇತ್ರದ ಶಾಸಕ, ಸಣ್ಣಕೈಗಾರಿಕೆ ಅಭಿವೃದ್ಧಿ ನಿಗಮ ಅಧ್ಯಕ್ಷ ಟಿ.ರಘುಮೂರ್ತಿ ತಿಳಿಸಿದರು.

ಅವರು, ನಗರದ ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣದ ಕಂಬಳಿ ಮಾರುಕಟ್ಟೆ ಆವರಣದಲ್ಲಿ ಚಿತ್ರದುರ್ಗ ಜಿಲ್ಲಾ ಸಹಕಾರಿ ಯೂನಿಯನ್, ಸಹಕಾರ ಮಹಾಮಂಡಳ, ಸಹಕಾರ ಕೇಂದ್ರ ಬ್ಯಾಂಕ್ ಹಾಗೂ ಸಹಕಾರ ಸಂಘಗಳ ಸಹಯೋಗದಲ್ಲಿ ಹಮ್ಮಿಕೊಂಡಿದ್ದ 71ನೇ ಅಖಿಲಭಾರತ ಸಹಕಾರ ಸಪ್ತಾಹ ಹಾಗೂ ಸಹಕಾರಿ ಉದ್ಯಮಿಗಳ ಪರಿವರ್ತನೆ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಜಿಲ್ಲಾ ಸಹಕಾರಿ ಯೂನಿಯನ್ ಉಪಾಧ್ಯಕ್ಷ ಎಚ್.ವಿ.ಪ್ರತಾಪಸಿಂಹ ಮಾತನಾಡಿ, ಸಹಕಾರ ಕ್ಷೇತ್ರವನ್ನು ಮುನ್ನೆಲೆಗೆ ತರುಲು ಸರ್ಕಾರದ ಸಹಕಾರ ಅಗತ್ಯ. ಇತ್ತೀಚಿನ ದಿನಗಳಲ್ಲಿ ಸಹಕಾರಿ ಕ್ಷೇತ್ರದ ಅಭಿವೃದ್ಧಿಗೆ ಹೆಚ್ಚು ಒತ್ತು ನೀಡುತ್ತಿಲ್ಲ.

ಸಹಕಾರಿ ಕ್ಷೇತ್ರ ತನ್ನದೇಯಾದ ಸುಧೀರ್ಘ ಇತಿಹಾಸ ಹೊಂದಿದೆ. ಸಹಕಾರಿ ಸಪ್ತಾಹದ ಮೂಲಕ ನಾವೆಲ್ಲರೂ ಸಹಕಾರಿ ಕ್ಷೇತ್ರದ ಶ್ರೇಯೋಭಿವೃದ್ಧಿಗೆ ಕೈಜೋಡಿಸೋಣವೆಂದರು.





ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಜಿಲ್ಲಾ ಸಹಕಾರಿ ಯೂನಿಯನ್ ಅಧ್ಯಕ್ಷ ಕೆ.ಎಚ್.ಜಗನ್ನಾಥ ಮಾತನಾಡಿ, ಸಹಕಾರಿ ಕ್ಷೇತ್ರ ನಿಂತನೀರಾಗಬಾರದು. ಹರಿಯುವ ನೀರಿನಿಂದ ಮಾತ್ರ ಎಲ್ಲಾ ಉಪಯೋಗವನ್ನು ನಾವು ಪಡೆಯಬಹುದು.

ಸಹಕಾರಿ ಬಂಧುಗಳು ಈ ಕ್ಷೇತ್ರದ ಕ್ರಿಯಾಶೀಲ ಚಟುವಟಿಕೆಗಳಿಗೆ ಸಹಕಾರ ನೀಡಬೇಕು ಎಂದರು. ಇದೇ ಸಂದರ್ಭದಲ್ಲಿ ಸಹಕಾರಿ ಕ್ಷೇತ್ರದಲ್ಲಿ ಉತ್ತಮ ಸೇವೆ ಸಲ್ಲಿಸಿದ ಹಿರಿಯ ಸಹಕಾರಿ ದುರೀಣ ಗುಡಿಹಳ್ಳಿರಂಗಣ್ಣ, ಓಬಳಾಪುರ, ಸಿದ್ದೇಶ್ವರನದುರ್ಗ, ಪರಶುರಾಮಪುರ, ಗಜ್ಜಾಗನಹಳ್ಳಿ ಪ್ರಾಥಮಿಕ ಪತ್ತಿನ ಸಹಕಾರಿ ಸಂಘಗಳನ್ನು ಗೌರವಿಸಲಾಯಿತು. ಕಾರ್ಯಕ್ರಮದಲ್ಲಿ ಸಹಕಾರ ರತ್ನಪುರಸ್ಕೃತರಾದ ಸಿ.ವೀರಭದ್ರಬಾಬು, ಸಿ.ಬಿ. ಆದಿಭಾಸ್ಕರಶೆಟ್ಟಿ, ಜಿಂಕಲ್‌ಬಸವರಾಜು, ಕೆ.ಜಗನ್ನಾಥ, ಮಾತೃಶ್ರೀಎನ್.ಮಂಜುನಾಥ, ಪ್ರಭಾವತಿ, ಬಿ.ಮಲ್ಲಿಕಾರ್ಜುನಪ್ಪ, ಜಿ.ಎಂ.ಸಂದೀಪ್, ಸಹಕಾರಿ ಅಭಿವೃದ್ಧಿ ಅಧಿಕಾರಿ ವಿ.ಬಷೀರ್‌ಖಾನ್, ಮೇಲ್ವಿಚಾರಕ ಜಿ.ವಿ.ಸತೀಶ್‌ರೆಡ್ಡಿ, ಎಸ್.ನಯಾಜ್‌ಬೇಗ್, ಎಸ್.ಜಿ.ಕೃಷ್ಣಕುಮಾರ್ ಮುಂತಾದವರು ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ದಿಶಾ ಸಭೆ: ನ.21ಕ್ಕೆ ಮುಂದೂಡಿಕೆ

» ಚಿತ್ರದುರ್ಗ

ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಇದೇ ನ.19ರಂದು ಬೆಳಿಗ್ಗೆ 11ಕ್ಕೆ ಸಂಸದ ಗೋವಿಂದ ಎಂ ಕಾರಜೋಳ ಅಧ್ಯಕ್ಷತೆಯಲ್ಲಿ ನಡೆಯಬೇಕಿದ್ದ ಕೇಂದ್ರ ಪುರಸ್ಕೃತ ಯೋಜನೆಗಳ ಜಿಲ್ಲಾ ಅಭಿವೃದ್ಧಿ ಸಮನ್ವಯ ಮತ್ತು ಉಸ್ತುವಾರಿ ಸಮಿತಿ (ದಿಶಾ) ಸಭೆಯನ್ನು ಕಾರಣಾಂತರಗಳಿಂದ ನ.21ರಂದು ಮಧ್ಯಾಹ್ನ 12.30ಕ್ಕೆ ಮುಂದೂಡಲಾಗಿದೆ ಎಂದು ಜಿ.ಪಂ ಸಿಇಒ ಎಸ್.ಜೆ.ಸೋಮಶೇಖರ್ ತಿಳಿಸಿದ್ದಾರೆ.

### ತರಬೇತಿ ಶಿಬಿರಕ್ಕೆ ಅರ್ಜಿ ಆಹ್ವಾನ

» ಚಿತ್ರದುರ್ಗ

2024–25ನೇ ಸಾಲಿನಲ್ಲಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಪರಿಶಿಷ್ಟ ಜಾತಿ ಉಪಯೋಜನೆಯಡಿಯಲ್ಲಿ ಪರಿಶಿಷ್ಟ ಜಾತಿ ಯುವ ಜನರಿಗೆ ಅನುಷ್ಠಾನಗೊಳಿಸಲಿರುವ ತರಬೇತಿ ಶಿಬಿರಕ್ಕೆ ಅರ್ಜಿ ಆಹ್ವಾನಿಸಲಾಗಿದೆ. ನವೆಂಬರ್ 25 ಅರ್ಜಿ ಸಲ್ಲಿಸಲು ಕೊನೆಯ ದಿನ. ಯುವ ಜನರನ್ನು ಸ್ವಾವಲಂಬಿಯಾಗಲು ಉತ್ತೇಜಿಸುವ ದೃಷ್ಠಿಯಿಂದ ಹೊಲಿಗೆ ತರಬೇತಿ ಶಿಬಿರ, ಜಿಮ್ ಫಿಟ್ನೆಸ್ ಮತ್ತು ವಿಡಿಯೋಗ್ರಾಫಿ ತರಬೇತಿ ಶಿಬಿರಗಳನ್ನು ಹಮ್ಮಿಕೊಳ್ಳಲಾಗಿದೆ. ಎಸ್‌ಎಸ್‌ಎಲ್‌ಸಿ ಪಾಸ್ ಅಥವಾ ಫೇಲ್ ಆದ 18 ರಿಂದ 40 ವರ್ಷ ವಯೋಮಿತಿಯವರಿಗೆ 2024ರ ನವೆಂಬರ್ 28 ರಿಂದ ಡಿಸೆಂಬರ್ 17 ರವರೆಗೆ 20 ದಿನಗಳ ಕಾಲ ಹೊಲಿಗೆ ತರಬೇತಿ ಶಿಬಿರವು ಬೆಂಗಳೂರಿನ ಕುಂಬಳಗೋಡು ತರಬೇತಿ ಕೇಂದ್ರದಲ್ಲಿ ತರಬೇತಿ ನಡೆಯಲಿದೆ. ದ್ವಿತೀಯ ಪಿಯು ಪಾಸ್ ಅಥವಾ ಫೇಲ್ ಆದ 18 ರಿಂದ 40 ವರ್ಷ ವಯೋಮಿತಿಯವರಿಗೆ 2024ರ ಡಿಸೆಂಬರ್ 06 ರಿಂದ ಡಿಸೆಂಬರ್ 17 ರವರೆಗೆ 12 ದಿನಗಳ ವರರೆಗೆ ವೀಡಿಯೋಗ್ರಫಿ ತರಬೇತಿ ಶಿಬಿರವು ಬೆಂಗಳೂರಿನ ಕುಂಬಳಗೋಡು ತರಬೇತಿ ಕೇಂದ್ರದಲ್ಲಿ ತರಬೇತಿ ನಡೆಯಲಿದೆ.ದ್ವಿತೀಯ ಪಿಯುಸಿ ಪಾಸ್ ಅಥವಾ ಫೇಲ್ ಆದ 18 ರಿಂದ 40 ವರ್ಷ ವಯೋಮಿತಿಯರಿಗೆ 2024ರ ಡಿಸೆಂಬರ್ 03 ರಿಂದ 17 ರವರೆಗೆ ಜಿಮ್ ಫಿಟ್ನೆಸ್ ತರಬೇತಿಯು ಬೆಂಗಳೂರಿನ ಶ್ರೀ ಕಂಠೀರವ ಕ್ರೀಡಾಂಗಣದಲ್ಲಿ ನಡೆಯಲಿದೆ. ತರಬೇತಿ ಶಿಬಿರಗಳಿಗೆ ಅರ್ಜಿ ಸಲ್ಲಿಸಲು ಪರಿಶಿಷ್ಟ ಜಾತಿಯ ಯುವ ಜನರು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಕಚೇರಿಯಿಂದ ಅರ್ಜಿ ಪಡೆದು ಇದೇ ನವೆಂಬರ್ 25 ರೊಳಗೆ ಕಚೇರಿಗೆ ಸಲ್ಲಿಸಬೇಕು. ತರಬೇತಿ ಶಿಬಿರಗಳಲ್ಲಿ ಭಾಗವಹಿಸುವ ಕ್ರೀಡಾಪಟುಗಳಿಗೆ ಊಟೋಪಹಾರ, ಪ್ರಮಾಣ ಪತ್ರ ಹಾಗೂ ಈ ಶಿಬಿರದಲ್ಲಿ ಭಾಗವಹಿಸುವ ಯುವತಿಯರಿಗೆ ಸಾಮಾನ್ಯ ವಸತಿ ವ್ಯವಸ್ಥೆ ಇರುತ್ತದೆ. ಹೆಚ್ಚಿನ ಮಾಹಿತಿಗಾಗಿ ಕಚೇರಿಯ ದೂರವಾಣಿ ಸಂಖ್ಯೆ 08194–235635 ಗೆ ಸಂಪರ್ಕಿಸಬಹುದು ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ನ.19 ರವರೆಗೆ ವಾಣಿವಿಲಾಸ ಸಾಗರ ನೀರು ಸರಬರಾಜು ತಾತ್ಕಾಲಿಕ ಸ್ಥಗಿತ



» ಚಿತ್ರದುರ್ಗ

ಚಿತ್ರದುರ್ಗ ನಗರಕ್ಕೆ ಕುಡಿಯುವ ನೀರು ಸರಬರಾಜಾಗುವ ವಾಣಿವಿಲಾಸ ಸಾಗರ ನೀರು ಸರಬರಾಜು ಯೋಜನೆಯ ಮುಖ್ಯ ಕೊಳವೆ ಮಾರ್ಗದಲ್ಲಿ ದುರಸ್ಥಿ ಕೆಲಸ ಕೈಗೊಳ್ಳಬೇಕಾಗಿರುವುದರಿಂದ ವಾಣಿವಿಲಾಸ ಸಾಗರ ನೀರು ಸರಬರಾಜು ವ್ಯವಸ್ಥೆಯನ್ನು ತಾತ್ಕಾಲಿಕವಾಗಿ ಇದೇ ನ.16 ರಿಂದ 19 ರವರೆಗೆ ಸ್ಥಗಿತಗೊಳಿಸಲಾಗುತ್ತಿದೆ. ಸಾರ್ವಜನಿಕರು ತಮ್ಮ ತಮ್ಮ ಪ್ರದೇಶದಲ್ಲಿನ ಕೊಳವೆ ಬಾವಿಗಳ ನೀರನ್ನು ಮತ್ತು ಶುದ್ಧ ಕುಡಿಯುವ ನೀರನ್ನು ಉಪಯೋಗಿಸಲು ಕೋರಿದೆ. ನೀರನ್ನು ಮಿತವಾಗಿ ಬಳಸಿ ಸಾರ್ವಜನಿಕರು ನಗರಸಭೆಯೊಂದಿಗೆ ಸಹಕರಿಸಬೇಕು ಎಂದು ಚಿತ್ರದುರ್ಗ ನಗರಸಭೆ ಪೌರಾಯುಕ್ತೆ ಎಂ.ರೇಣುಕಾ ತಿಳಿಸಿದ್ದಾರೆ.

## ಫಾಸ್ಟ್ ನ್ಯೂಸ್

### ಗ್ಯಾರಂಟಿ ಅರ್ಹ ಫಲಾನುಭವಿಗಳಿಗೆ ಸಿಗುವಂತಾಗಬೇಕು



» **ಮೊದಲ ಪುಟದಿಂದ**

ನಗರದ ತಾಪಂ ಆವರಣದಲ್ಲಿ ತಾಲೂಕು ಗ್ಯಾರಂಟಿ ಅನುಷ್ಠಾನ ಸಮಿತಿ ನೂತನ ಕಚೇರಿ ಉದ್ಘಾಟಿಸಿ ಮಾತನಾಡಿದ ಅವರು ಪಂಚ ಗ್ಯಾರಂಟಿ ಯೋಜನೆ ಪ್ರಯೋಜನ ಎಲ್ಲ ಅರ್ಹ ಫಲಾನುಭವಿಗಳಿಗೆ ಸಿಗುವಂತಾಗಬೇಕು. ಯಾರು ಕೂಡ ಸೌಲಭ್ಯದಿಂದ ವಂಚಿತರಾಗಬಾರದು ಎಂಬ ಕಾರಣಕ್ಕೆ ರಾಜ್ಯ ಸರಕಾರ ತಾಲೂಕು ಮಟ್ಟದಲ್ಲಿ ಸಮಿತಿ ರಚಿಸಿದೆ.ತಾಲ್ಲೂಕಿನಲ್ಲಿ ಗೃಹಲಕ್ಷ್ಮಿ ಯೋಜನೆಯಡಿ 56220, ಗೃಹ ಜ್ಯೋತಿ ಸಂಪರ್ಕ 61388, ಅನ್ನ ಭಾಗ್ಯ 54949, ಯುವನಿಧಿಯಡಿ 1917 ಫಲಾನುಭವಿಗಳು ಗ್ಯಾರಂಟಿ ಯೋಜನೇಯ ಲಾಭ ಪಡೆಯುತ್ತಿದ್ದಾರೆ. ಪ್ರತಿ ತಿಂಗಳು 12000 ಮಹಿಳೆಯರು ಶಕ್ತಿ ಯೋಜನೆಯ ಪ್ರಯೋಜನ ಪಡೆಯುತ್ತಿದ್ದಾರೆ. ತಾಲ್ಲೂಕಿನಲ್ಲಿ ಗ್ಯಾರಂಟಿ ಯೋಜನೆಗಳಿಗೆ ಪ್ರತಿ ತಿಂಗಳು 21.59 ಕೋಟಿ ರೂ ಹಾಗೂ ವರ್ಷಕ್ಕೆ 259.08 ಕೋಟಿ ರೂ ವ್ಯಯಿಸಲಾಗುತ್ತಿದೆ ಮಾಡಲಾಗುತ್ತಿದೆ ಎಂದರು. ಚಳ್ಳಕೆರೆ ಶಾಸಕ ಟಿ. ರಘುಮೂರ್ತಿ, ಟಿ ಎ ಪಿ ಸಿ ಎಂ ಎಸ್ ಅಧ್ಯಕ್ಷ ಕಾರೇಹಳ್ಳಿ ಬಸವರಾಜು, ಗ್ಯಾರಂಟಿ ಸಮಿತಿ ಜಿಲ್ಲಾಧ್ಯಕ್ಷ ಶಿವಣ್ಣ, ತಾಲೂಕು ಅಧ್ಯಕ್ಷ ಮಹಮದ್ ಇಸ್ಮಾಯಿಲ್, ಉಪಾಧ್ಯಕ್ಷ ಶ್ರೀನಿವಾಸ್ ಮೂರ್ತಿ, ಸದಸ್ಯರಾದ ಸಣ್ಣ ಕಿಟ್ಟದಹಳ್ಳಿ ಶ್ರೀನಿವಾಸ್, ಕೆ ಕೆ ಹಟ್ಟಿ ಧನಂಜಯ್, ರಾಜೇಂದ್ರ ನಾಯ್ಕ್, ಲೋಕೇಶ್, ಗುರುಮೂರ್ತಿ, ಖಾಧರ್ ನವಜ್, ಮಂಜುನಾಥ್, ಪ್ರಭಾಕರ್, ಲೋಹಿತ್, ಮದುರೆ ಶರತ್ ಮತ್ತಿತರಿದ್ದರು.

### ದುಶ್ಚಟಗಳಿಂದ ದೂರವಿದ್ದು ಸಮಾಜದ ಅಭಿವೃದ್ಧಿಗೆ ಪ್ರೇರಕರಾಗಿ : ಪ್ರಭುದೇವ್.




» **ಚಳ್ಳಕೆರೆ**

ಗ್ರಾಮೀಣಭಾಗದ ಜನರನ್ನು ಜಾಗೃತಿಮೂಡಿಸಿದಾಗ ಮಾತ್ರ ಸ್ವಾಸ್ಥ್ಯಸಂಕಲ್ಪ ಕಾರ್ಯಕ್ರಮ ಯಶಸ್ಸು ಕಾಣಲು ಸಾಧ್ಯವೆಂದು ಜಿಲ್ಲಾ ತಂಬಾಕು ನಿಯಂತ್ರಣಮಂಡಳಿ ಜಿಲ್ಲಾ ಸಂಚಾಲಕ ಪ್ರಭುದೇವ್ ತಿಳಿಸಿದರು. ಅವರು, ಓಬಳಾಪುರ ಗ್ರಾಮ ಪಂಚಾಯಿತಿ ವ್ಯಾಪ್ತಿಯ ತಿಪ್ಪಾರೆಡ್ಡಿಹಳ್ಳಿ ಸರ್ಕಾರಿ ಪ್ರೌಢಶಾಲೆಯಲ್ಲಿ ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ, ಜಿಲ್ಲಾ ತಂಬಾಕು ನಿಯಂತ್ರಣಮಂಡಳಿ ಹಾಗೂ ಶಿಕ್ಷಣ ಇಲಾಖೆ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ಸ್ವಾಸ್ಥ್ಯ ಸಂಕಲ್ಪ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ಇಂತಹ ಕಾರ್ಯಕ್ರಮಗಳು ಹೆಚ್ಚು, ಹೆಚ್ಚು ನಡೆದಲ್ಲಿ ಮಾತ್ರ ಜನರಲ್ಲಿ ಆತ್ಮವಿಶ್ವಾಸ ಹೆಚ್ಚುತ್ತದೆ. ಮದ್ಯಪಾನ, ದೂಮಪಾನದಂತಹ ಚಟಗಳಿಂದ ದೂರವಿರಲು ಗ್ರಾಮೀಣ ಜನರಿಗೆ ವಿದ್ಯಾರ್ಥಿಗಳು ಪ್ರೇರಣೆ ನೀಡಬೇಕೆಂದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಮುಖ್ಯ ಶಿಕ್ಷಕ ಶ್ರೀನಿವಾಸ್‌ಮೂರ್ತಿ ಮಾತನಾಡಿ, ಪ್ರೌಢಶಾಲಾ ಹಂತದಲ್ಲಿ ವಿದ್ಯಾರ್ಥಿಗಳು ಯಾವುದೇ ಕಾರ್ಯಮಾಡಲು ಸಮರ್ಥವಿರುತ್ತಾರೆ. ಇಂದು ನಮ್ಮ ಶಾಲೆಯಲ್ಲಿ ಎರಡು ವಿಭಿನ್ನಕಾರ್ಯಕ್ರಮಗಳನ್ನು ಹಮ್ಮಿಕೊಂಡಿದ್ದರೂ ಅವುಗಳ ಅನುಷ್ಠಾನದಿಂದ ಉತ್ತಮಸಮಾಜನಿರ್ಮಾಣಕ್ಕೆಸಹಕಾರಿಯಾಗುತ್ತದೆ ಎಂದರು. ಕಾರ್ಯಕ್ರಮದಲ್ಲಿ ವಲಯ ಮೇಲ್ವಿಚಾರಕ ಶಿವಕುಮಾರ್, ತಿಪ್ಪೇಸ್ವಾಮಿ, ವೆಂಕಟೇಶ್, ಶಿಕ್ಷಕರಾದ ಎಂ.ಶಿವಣ್ಣ, ಇರ್ಫಾನಾ, ರಾಧಮ್ಮ, ಧನಂಜಯ, ಆಶಾ, ನವೀನ್‌ಕುಮಾರ್ ಮುಂತಾದವರು ಉಪಸ್ಥಿತರಿದ್ದರು.

### ವೃದ್ಧ ಕಾಣೆ

» **ದಾವಣಗೆರೆ**

ಚನ್ನಗಿರಿ ತಾಲ್ಲೂಕಿನ ಬಸವಪಟ್ಟಣ ಪೊಲೀಸ್ ಠಾಣೆಯ ವ್ಯಾಪ್ತಿಯ ಚಿರಡೋಣಿ ಗ್ರಾಮದ ಕೆ.ಬಿ.ಪರಶುರಾಮ ಬಿನ್ ಬಸವರಾಜಪ್ಪ 70 ವರ್ಷ, ಇವರು ಕಳೆದ 2022 ರ ಆಗಸ್ಟ್ 28 ರಂದು ಮನೆಯಿಂದ ಎಲ್ಲಿಗೋ ಹೋಗಿ ಇದುವರೆಗೂ ವಾಪಾಸ್ ಬಂದಿರುವುದಿಲ್ಲ. ಇವರ ಬಗ್ಗೆ ಸುಳಿವು ಸಿಕ್ಕಲ್ಲಿ ಬಸವಾಪಟ್ಟಣ ಪೊಲೀಸ್ ಠಾಣೆ ಪಿಎಸ್‌ಐ ದೂ.ಸಂ: 9480803260 ಸಂಖ್ಯೆಗೆ ಮಾಹಿತಿ ನೀಡಲು ಪೊಲೀಸ್ ಠಾಣೆಯ ಪೊಲೀಸ್ ಸಬ್‌ಇನ್ಸ್‌ಪೆಕ್ಟರ್ ತಿಳಿಸಿದ್ದಾರೆ.

**ವ್ಯಕ್ತಿ ಕಾಣೆ:** ಚನ್ನಗಿರಿ ತಾಲ್ಲೂಕಿನ ಬಸವಪಟ್ಟಣ ಪೊಲೀಸ್ ಠಾಣೆಯ ವ್ಯಾಪ್ತಿಯ ಕತ್ತಲಗೆರೆ ಗ್ರಾಮದ ಶಂಭು ಬಿನ್ ಚನ್ನಬಸಪ್ಪ 26 ವರ್ಷ, ಇವರು ಕಳೆದ ಮಾರ್ಚ್ 22 ರಂದು ಕತ್ತಲಗೆರೆ ಗ್ರಾಮದಿಂದ ಸಾಲ ಜಾಸ್ತಿಯಾಗಿದ್ದರಿಂದ ಮನೆಬಿಟ್ಟು ಹೋದವನು ಇದುವರೆಗೂ ವಾಪಾಸ್ ಬಂದಿರುವುದಿಲ್ಲ. ಸುಳಿವು ಸಿಕ್ಕಲ್ಲಿ ಬಸವಾಪಟ್ಟಣ ಠಾಣೆ ಪಿಎಸ್‌ಐ ದೂ.ಸಂ: 9480803260, 9480803200 ಸಂಖ್ಯೆಗೆ ಮಾಹಿತಿ ನೀಡಲು ತಿಳಿಸಿದ್ದಾರೆ.

---

ರಾಷ್ಟ್ರೀಯ ಗ್ರಂಥಾಲಯ ಸಪ್ತಾಹ ಸಮಾರೋಪ ಸಮಾರಂಭ ಹಾಗೂ ಬಹುಮಾನ ವಿತರಣೆ ಕಾರ್ಯಕ್ರಮದಲ್ಲಿ ನಗರಸಭೆ ಅಧ್ಯಕ್ಷೆ ಬಿ.ಎನ್.ಸುಮಿತಾ

# ಪುಸ್ತಕ ಓದುವ ಹವ್ಯಾಸ ರೂಢಿಸಿಕೊಳ್ಳಿ

» **ಚಿತ್ರದುರ್ಗ**

ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ವಿದ್ಯಾರ್ಥಿಗಳು ಪತ್ರಿಕೆ ಹಾಗೂ ಪುಸ್ತಕ ಓದುವ ಹವ್ಯಾಸ ರೂಢಿಸಿಕೊಳ್ಳಬೇಕು ಎಂದು ನಗರಸಭೆ ಅಧ್ಯಕ್ಷೆ ಬಿ.ಎನ್.ಸುಮಿತಾ ಹೇಳಿದರು.

ನಗರದ ಶ್ರೀ ಕೃಷ್ಣ ರಾಜೇಂದ್ರ ನಗರ ಕೇಂದ್ರ ಗ್ರಂಥಾಲಯದಲ್ಲಿ ಶನಿವಾರ ಸಾರ್ವಜನಿಕ ಗ್ರಂಥಾಲಯ ಇಲಾಖೆ ಹಾಗೂ ಚಿತ್ರದುರ್ಗ ನಗರ ಕೇಂದ್ರ ಗ್ರಂಥಾಲಯ ಇಲಾಖೆ ವತಿಯಿಂದ ಆಯೋಜಿಸಲಾಗಿದ್ದ ರಾಷ್ಟ್ರೀಯ ಗ್ರಂಥಾಲಯ ಸಪ್ತಾಹ ಸಮಾರೋಪ ಸಮಾರಂಭ ಮತ್ತು ಬಹುಮಾನ ವಿತರಣೆ ಕಾರ್ಯಕ್ರಮದಲ್ಲಿ ಎಸ್.ಆರ್.ರಂಗನಾಥ್ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ ಅವರು ಮಾತನಾಡಿದರು.

ಪ್ರಸ್ತುತ ದಿನಮಾನಗಳಲ್ಲಿ ಯುವ ಪೀಳಿಗೆ ವಿವಿಧ ರೀತಿಯ ದುಶ್ಚಟ ಹಾಗೂ ಮೊಬೈಲ್ ಗೀಳಿಗೆ ದಾಸರಾಗುತ್ತಿದ್ದಾರೆ. ಇವುಗಳಿಂದ ಹೊರಬಂದು ಗ್ರಂಥಾಲಯದಲ್ಲಿನ ಸಂಪನ್ಮೂಲಗಳನ್ನು ಬಳಸಿಕೊಂಡು ಜ್ಞಾನ ಸಂಪತ್ತು ವೃದ್ಧಿಸಿಕೊಳ್ಳಬೇಕು.

ಪುಸ್ತಕದ ಸಾಂಗತ್ಯದಿಂದ ಉನ್ನತ ಮಟ್ಟಕ್ಕೆ ಬೆಳೆದು ಮುಂದಿನ ಪೀಳಿಗೆಗೆ ಮಾದರಿಯಾಗಬೇಕು ಎಂದು ಸಲಹೆ ನೀಡಿದರು.



ನಗರ ಕೇಂದ್ರ ಗ್ರಂಥಾಲಯದ ಮುಖ್ಯ ಗ್ರಂಥಾಲಯಾಧಿಕಾರಿ ಕೊಳ್ಳಿ ಬಸವರಾಜ ಮಾತನಾಡಿ, ಪ್ರತಿ ವರ್ಷ ನ.14 ರಿಂದ 20ರವರೆಗೆ ದೇಶಾದ್ಯಂತ ರಾಷ್ಟ್ರೀಯ ಗ್ರಂಥಾಲಯ ಸಪ್ತಾಹ ಆಚರಿಸಲಾಗುತ್ತದೆ. ದೇಶದಲ್ಲಿ ಗ್ರಂಥಾಲಯ ಎಂಬ ಪರಿಕಲ್ಪನೆ ನೀಡಿದವರು ಎಸ್.ಆರ್.ರಂಗನಾಥ್. ಈ ಮೂಲಕ ಲಕ್ಷಾಂತರ ವಿದ್ಯಾರ್ಥಿಗಳಿಗೆ ವಿದ್ಯೆ, ಜ್ಞಾನಾರ್ಜನೆ, ಉದ್ಯೋಗಾವಕಾಶ ದೊರಕಿಸಿಕೊಟ್ಟ ಮಹಾನ್ ಚೇತನ ಎಂದು ತಿಳಿಸಿದರು.

ಮಕ್ಕಳನ್ನು ಮುನ್ನೆಲೆಗೆ ತರುವ ನಿಟ್ಟಿನಲ್ಲಿ ವಿವಿಧ ಕಾರ್ಯಕ್ರಮಗಳ ಆಯೋಜಿಸಲಾಗುತ್ತಿದೆ.ಅದರಂತೆಮಕ್ಕಳಿಗೆ ಗ್ರಂಥಾಲಯ ಮಹತ್ವ ತಿಳಿಸಲು, ಮಕ್ಕಳ ಗ್ರಂಥಾಲಯ ಸ್ಥಾಪಿಸಲಾಗಿದೆ. ಆದ್ದರಿಂದ ವಿದ್ಯಾರ್ಥಿಗಳು, ಮಕ್ಕಳು, ಓದುಗರು ಇದರ ಸದ್ಬಳಕೆ ಮಾಡಿಕೊಳ್ಳಬೇಕು ಎಂದರು.

ಜಿಲ್ಲಾ ಮಕ್ಕಳ ಸಾಹಿತ್ಯ ಪರಿಷತ್‌ನ ಜಿಲ್ಲಾಧ್ಯಕ್ಷ ಯೋಗೇಶ್ ಸಹ್ಯಾದ್ರಿ ಮಾತನಾಡಿ, ಯಾವುದೇ ಒಂದು ಗ್ರಂಥಾಲಯ ಉಳಿಯಬೇಕು, ಬೆಳೆಯಬೇಕು ಎಂದರೆ ಮುಖ್ಯ ಕಾರಣ ಓದುಗರು. ಗ್ರಂಥಾಲಯಗಳು ಇರುವುದೇ ಓದುಗರಿಗೋಸ್ಕರ.ಪುಸ್ತಕಓದುವುದರಿಂದ ಸಿಗುವ ಖುಷಿ, ಸಂತೋಷ ಪರ್ಯಾಯ ವಸ್ತುಗಳಲ್ಲಿ ಸಿಗುವುದಿಲ್ಲ. ಆದ್ದರಿಂದ ರಾಷ್ಟ್ರೀಯ ಗ್ರಂಥಾಲಯ ಸಪ್ತಾಹದ ಉತ್ತಮವಾದ ವೇದಿಕೆ ಕಲ್ಪಿಸಲಾಗಿದೆ. ಇಂತಹ ವೇದಿಕೆಗಳನ್ನು ಬಳಸಿಕೊಂಡು ಉತ್ತಮವಾದ ಓದುಗನಾದರೆ, ಒಳ್ಳೆಯ ಬರಹಗಾರ, ವಾಗ್ಮಿ, ಸಾಹಿತಿ ಅಷ್ಟೇ ಅಲ್ಲದೇ, ಉತ್ತಮವಾದ ಜೀವನ ಶೈಲಿ ರೂಢಿಸಿಕೊಳ್ಳಬಹುದು. ಈ ಸಮಾಜದಲ್ಲಿ ವಿಶ್ವಮಾನವನಾಗಿ ಬಾಳಬೇಕಾದರೆ ಅದು ಓದಿನಿಂದ ಮಾತ್ರ ಸಾಧ್ಯ ಎಂದು ಅಭಿಪ್ರಾಯ ಪಟ್ಟರು.

ಯಶೋಧ ರಾಜಶೇಖರಪ್ಪ ಅವರು ಕನ್ನಡ ನಾಡಿಗೆ ಚಿತ್ರದುರ್ಗದ ಕೊಡುಗೆ ಹಾಗೂ ಗ್ರಂಥಾಲಯದ ಉಪಯೋಗ ಕುರಿತು ಉಪನ್ಯಾಸ ನೀಡಿದರು. ಇದೇ ಸಂದರ್ಭದಲ್ಲಿ ಚಿತ್ರಕಲೆ, ಪ್ರಬಂಧ ಸ್ಪರ್ಧೆ, ಉತಮ ಓದುಗ, ಆಶುಭಾಷಣ ಹಾಗೂ ರಂಗೋಲಿಸ್ಪರ್ಧೆಯಲ್ಲಿವಿಜೇತರಾದವರಿಗೆ ಪ್ರಶಸ್ತಿ ಪತ್ರ ಮತು ನೆನಪಿನ ಕಾಣಿಕೆ ನೀಡಿ ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ಸಾಹಿತಿ ಹೆಚ್. ಆನಂದ್ ಕುಮಾರ್, ನಗರಸಭೆ ಸದಸ್ಯೆ ಪಿ.ಎನ್.ಶ್ವೇತಾ ಸೇರಿದಂತೆ ಗ್ರಂಥಾಲಯದ ಸಿಬ್ಬಂದಿ, ಓದುಗರು ಇದ್ದರು.

---

ಜಿಲ್ಲಾ ಪಂಚಾಯಿತಿ ಸಿಇಒ ಎಸ್.ಜೆ.ಸೋಮಶೇಖರ್ ಮಾಹಿತಿ

# ನ.19ರಿಂದ ಡಿ.12 ರವರೆಗೆ ನಮ್ಮ ಶೌಚಾಲಯ–ನಮ್ಮ ಗೌರವ ವಿಶೇಷ ಆಂದೋಲನ

» **ಚಿತ್ರದುರ್ಗ**

ವಿಶ್ವ ಶೌಚಾಲಯ ದಿನಾಚರಣೆ ಪ್ರಯುಕ್ತ ಇದೇ ನ 19 ರಿಂದ ಡಿಸೆಂಬರ್ 10 ರವರೆಗೆ "ನಮ್ಮ ಶೌಚಾಲಯ–ನಮ್ಮ ಗೌರವ" ಎಂಬ ವಿಶೇಷ ಆಂದೋಲನ ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಜೆ.ಸೋಮಶೇಖರ್ ತಿಳಿಸಿದ್ದಾರೆ.

ಗ್ರಾಮೀಣ ಸಮುದಾಯದಲ್ಲಿ ಸುರಕ್ಷಿತ ನೈರ್ಮಲ್ಯ, ಶುಚಿತ್ವ ಕುರಿತು ಜಾಗೃತಿ ಮೂಡಿಸಿ ಶೌಚಾಲಯಗಳನ್ನು ನಿರಂತರವಾಗಿ ಬಳಸುವಂತೆ ಪ್ರೇರೇಪಿಸುವ ಉದ್ದೇಶದೊಂದಿಗೆ ಪ್ರತಿ ವರ್ಷ ನ.19ರಂದು ವಿಶ್ವ ಶೌಚಾಲಯ ದಿನವನ್ನಾಗಿ ಆಚರಿಸಲಾಗುತ್ತಿದೆ. ಈ ದಿನಾಚರಣೆಯು ಬಯಲು ಬಹಿರ್ದೆಸೆ ಮುಕ್ತ ಸ್ಥಿತಿಯ ಸ್ಥಾನಮಾನ ಉಳಿಸಿಕೊಳ್ಳುವಲ್ಲಿ ಪ್ರಮುಖ ಪಾತ್ರ ವಹಿಸಲಿದೆ. ಈ ನಿಟ್ಟಿನಲ್ಲಿ ವಿಶ್ವ ಶೌಚಾಲಯ ಮತ್ತು ವಿಶ್ವ ಮಾನವ ಹಕ್ಕುಗಳ ದಿನಾಚರಣೆ ಪ್ರಯುಕ್ತ ಪ್ರಸ್ತುತ ವರ್ಷ "ನಮ್ಮ ಶೌಚಾಲಯ–ನಮ್ಮ ಗೌರವ ಎಂಬ ಶೀರ್ಷಿಕೆ ಹಾಗೂ "ಅಂದದ ಶೌಚಾಲಯ–ಆನಂದದ ಜೀವನ" ಎಂಬ ಘೋಷವಾಕ್ಯದೊಂದಿಗೆ ವಿಶೇಷ ಆಂದೋಲನ ಆಯೋಜಿಸಲಾಗುತ್ತಿದೆ. ವಿಶೇಷ ಆಂದೋಲನದಲ್ಲಿ ಜಿಲ್ಲಾಮಟ್ಟದ, ತಾಲ್ಲೂಕುಮಟ್ಟದ ಮತ್ತು ಗ್ರಾಮ ಪಂಚಾಯಿತಿಗಳ ಮಟ್ಟದಲ್ಲಿ ಜಾಗೃತಿ ಚಟುವಟಿಕೆಗಳನ್ನು ಕಡ್ಡಾಯವಾಗಿ ಹಮ್ಮಿಕೊಳ್ಳಲಾಗುವುದು.



ಜಿಲ್ಲಾಮಟ್ಟದಲ್ಲಿ ನ.19ರಂದು ಜಿಲ್ಲೆಯಲ್ಲಿ ವಿಶ್ವ ಶೌಚಾಲಯ ದಿನಾಚರಣೆ ಕಾರ್ಯಕ್ರಮಕ್ಕೆ ಚಾಲನೆ ಹಾಗೂ ಅಂದು ಜಿಲ್ಲಾ ನೀರು ಮತ್ತು ನೈರ್ಮಲ್ಯ ಮಿಷನ್ ಸಭೆಯನ್ನು ಕಡ್ಡಾಯವಾಗಿ ಆಯೋಜಿಸಲಾಗುವುದು. ತಾಲ್ಲೂಕುಪಂಚಾಯಿತಿಗಳಲ್ಲಿ ಶಿಫಾರಸ್ಸುಗೊಂಡ ಅತ್ಯುತ್ತಮ ಗೃಹ ಶೌಚಾಲಯಗಳ ಪೈಕಿ 5ನ್ನು ಆಯ್ಕೆ ಮಾಡುವುದು ಹಾಗೂ ಸಮುದಾಯ ಶೌಚಾಲಯಗಳ ಪೈಕಿ 5ನ್ನು ಆಯ್ಕೆ ಮಾಡಿ ಪುರಸ್ಕಾರ ನೀಡಿ ಗೌರವಿಸಲಾಗುವುದು.

ವಿಶೇಷ ಆಂದೋಲನ ಅಂಗವಾಗಿ ಎಲ್ಲ ತಾಲ್ಲೂಕು ಹಾಗೂ ಗ್ರಾಮ ಪಂಚಾಯಿತಿಗಳಲ್ಲಿ ಶೌಚಾಲಯ ಬಳಕೆ ಕುರಿತು ಸಮೀಕ್ಷೆ ನಡೆಸಲಾಗುವುದು. ಗೃಹ ಶೌಚಾಲಯಗಳನ್ನು ನಿರಂತರವಾಗಿ ಬಳಸುವ ಫಲಾನುಭವಿಗಳನ್ನು ಗುರುತಿಸಿಬಹುಮಾನನೀಡಿಗೌರವಿಸಲಾಗುವುದು. ಸ್ಪರ್ಧೆ ಆಯೋಜಿಸಿ ಅತ್ಯುತ್ತಮ ವೈಯಕ್ತಿಕ ಗೃಹ ಶೌಚಾಲಯಗಳನ್ನುಗುರುತಿಸಿಜಿಲ್ಲಾಮಟ್ಟದಸ್ಪರ್ಧೆ ಕಳುಹಿಸಿಕೊಡಲಾಗುವುದು.ಸ್ವಚ್ಛತಾಕಾರ್ಮಿಕರಿಗೆ ವಿಶೇಷ ಶಿಬಿರ ಆಯೋಜಿಸಲಾಗುವುದು. ಶೌಚಾಲಯ ರಹಿತ ಅರ್ಹ ಫಲಾನುಭವಿಗಳನ್ನು ಗುರುತಿಸಿ ಶೌಚಾಲಯ ನಿರ್ಮಾಣಕ್ಕೆ ಕ್ರಮವಹಿಸಲಾಗುವುದು. ಸಮುದಾಯ ಶೌಚಾಲಯಗಳನ್ನು ಶುಚಿತ್ವಗೊಳಿಸಿ ಉತ್ತಮ ರೀತಿಯಲ್ಲಿ ನಿರ್ವಹಣೆ ಮಾಡಲು ಹಾಗೂ ಅವುಗಳ ಸೌಂದರ್ಯೀಕರಣಕ್ಕೆ ಆಂದೋಲನ ಹಮ್ಮಿಕೊಳ್ಳಲಾಗುವುದು.

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ಸಾರ್ವಜನಿಕ ಶಿಕ್ಷಣ ಇಲಾಖೆಗಳು ಶೌಚಾಲಯ ಆಂದೋಲನಕ್ಕೆ ಸಹಯೋಗ ನೀಡಲಿವೆ. ಶೌಚಾಲಯ ಇಲ್ಲದಿರುವ ಆಸ್ಪತ್ರೆ, ಅಂಗನವಾಡಿ ಹಾಗೂ ಶಾಲೆಗಳನ್ನು ಪಟ್ಟಿ ಮಾಡಿ ಶೌಚಾಲಯ ನಿರ್ಮಾಣಕ್ಕೆಕ್ರಮವಹಿಸಲಿವೆ. ಈಗಾಗಲೇ ಇರುವ ಶೌಚಾಲಯಗಳನ್ನು ಉತ್ತಮವಾಗಿ ನಿರ್ವಹಣೆ ಮಾಡಲಿವೆ. ರೋಗಿಗಳು, ಮಕ್ಕಳು ಹಾಗೂ ಹದಿ ಹರೆಯದವರಿಗೆ ಅಂಗನವಾಡಿ, ಆಶಾ ಹಾಗೂ ಶಿಕ್ಷಕರು ಜಾಗೃತಿ ಮೂಡಿಸಲಿದ್ದಾರೆ. ಶಾಲೆಗಳಲ್ಲಿ ಈ ಕುರಿತು ನಾಟಕ, ಕಿರುಚಿತ್ರ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮ ಹಮ್ಮಿಕೊಳ್ಳಲಾಗುವುದು. ಇದರೊಂದಿಗೆ ಸಾಮಾಜಿಕ ಜಾಣತಾಣಗಳಲ್ಲಿಯೂ ಶೌಚಾಲಯ ಆಂದೋಲನದ ಬಗ್ಗೆ ಜಾಗೃತಿ ಮೂಡಿಸಲಾಗುವುದು ಎಂದು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಜೆ.ಸೋಮಶೇಖರ್ ತಿಳಿಸಿದ್ದಾರೆ.

---

# ಮಹಿಳೆ ಕೊಲೆ: ಆರೋಪಿಗಳ ಬಂಧಿಸದಿದ್ರೆ ಧರಣಿ; ಸ್ವಾಮೀಜಿ



» **ಚಿತ್ರದುರ್ಗ**

ಹೊಳಲ್ಕೆರೆ ತಾಲ್ಲೂಕಿನ ಉಪ್ಪರಿಗೇನಹಳ್ಳಿಯಲ್ಲಿ ಮಹಿಳೆಯ ಕೊಲೆಯಾಗಿ ಮೂರು ದಿನಗಳಾಗಿದ್ದರೂ ಇನ್ನು ಸುಳಿವು ಪತ್ತೆಯಾಗಿಲ್ಲ. ವಿಶೇಷ ತನಿಖಾ ತಂಡ ರಚಿಸಿ ಕೊಲೆಗೈದವರ ಪತ್ತೆಹಚ್ಚಬೇಕೆಂದು ಬ್ರಹ್ಮಶ್ರೀ ನಾರಾಯಣಗುರುಶಕ್ತಿಪೀಠದಪೀಠಾಧಿಪತಿಡಾ.ಪ್ರಣವಾನಂದಸ್ವಾಮೀಜಿ ಪೊಲೀಸ್ ಇಲಾಖೆಯನ್ನು ಒತ್ತಾಯಿಸಿದರು.

ಪತ್ರಕರ್ತರ ಭವನದಲ್ಲಿ ಶನಿವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಸ್ವಾಮೀಜಿ ಈಡಿಗ ಸಮುದಾಯಕ್ಕೆ ಸೇರಿದ ಮಹಿಳೆಯ ಕೊಲೆ ಪ್ರಕರಣವನ್ನು ಪೊಲೀಸರು ತನಿಖೆ ನಡೆಸುತ್ತಿದ್ದಾರೆ. ಇನ್ನು ಹದಿಮೂರು ದಿನಗಳು ಕಾಯುತ್ತೇವೆ. ಅಷ್ಟರೊಳಗೆ ಕೊಲೆಗಡುಕರನ್ನು ಬಂಧಿಸದಿದ್ದರೆ ಇದೆ ತಿಂಗಳ 30 ರಂದು ಜಿಲ್ಲಾ ರಕ್ಷಣಾಧಿಕಾರಿ ಕಚೇರಿ ಎದುರು ಉಪವಾಸ ಸತ್ಯಾಗ್ರಹ ಕೂರುವುದಾಗಿ ಸ್ವಾಮೀಜಿ ಗಡುವು ನೀಡಿದರು.

ಇನ್ನು ಮೂರು ನಾಲ್ಕು ದಿನಗಳಲ್ಲಿ ಗೃಹ ಮಂತ್ರಿ ಡಾ.ಜಿ.ಪರಮೇಶ್ವರ್‌ರವರನ್ನು ಭೇಟಿಯಾಗಿ ಮಹಿಳೆಯ ಕೊಲೆ ವಿಚಾರಕ್ಕೆ ಸಂಬಂಧಿಸಿದಂತೆ ಮಾತನಾಡುತ್ತೇವೆ. ನ್ಯಾಯಾಲಯದ ಮೊರೆ ಹೋಗುವುದಕ್ಕಾಗಿ ವಕೀಲರ ಜೊತೆಯೂ ಚರ್ಚಿಸುತ್ತೇನೆ. ಮಹಿಳೆಯ ಮರಣೋತ್ತರ ಪರಿಕ್ಷೆ ವರದಿ ಹಾಗೂ ಎಫ್.ಎಸ್.ಐ.ಎಲ್.ವರದಿಯನ್ನು ಬೇಗನೆ ತರಿಸಿಕೊಳ್ಳಬೇಕು. ಜಿಲ್ಲೆಯಲ್ಲಿ ಕಾನೂನು ಸುವ್ಯವಸ್ಥೆ ಹದಗೆಟ್ಟಿದೆ ಎಂದು ಡಾ.ಪ್ರಣವಾನಂದಸ್ವಾಮೀಜಿ ಆಪಾದಿಸಿದರು.

ತಿಪ್ಪೇಶ್,ಮಹಾಂತೇಶ್,ಮೋಹನ್ ಇವರುಗಳು ಪತ್ರಿಕಾಗೋಷ್ಠಿಯಲ್ಲಿ ಹಾಜರಿದ್ದರು.

---



ಅಂತರ ಕಾಲೇಜು ಮಟ್ಟದ ಪುರುಷರ ಬಾಲ್ ಬ್ಯಾಡ್ಮಿಂಟನ್ ಪಂದ್ಯಾವಳಿ ಪುರುಷ ಮತ್ತು ಮಹಿಳೆಯರ ವಿ.ವಿ. ತಂಡದ ಆಯ್ಕೆ ಸಮಾರೋಪ ಸಮಾರಂಭದಲ್ಲಿ ವಿಜೇತರಿಗೆ ಶಾಸಕ ಡಾ.ಎಂ.ಚಂದ್ರಪ್ಪ ಬಹುಮಾನ ವಿತರಿಸಿದರು.

### ನ.20 ನೇರ ನೇಮಕಾತಿ ಸಂದರ್ಶನ

**ಚಿತ್ರದುರ್ಗ:** ಚಿತ್ರದುರ್ಗ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ ವತಿಯಿಂದ ಇದೇ ನ.20ರಂದು ಬೆಳಿಗ್ಗೆ 10 ರಿಂದ ಮಧ್ಯಾಹ್ನ 3 ರವರೆಗೆ ನಗರದ ಉದ್ಯೋಗ ವಿನಿಮಯ ಕೇಂದ್ರದಲಿ ನೇರ ನೇಮಕಾತಿ ಸಂದರ್ಶನ ನಡೆಯಲಿದೆ. ಹೆಚ್ಚಿನ ಮಾಹಿತಿಗಾಗಿ ನಗರದ ಸ್ಟೇಡಿಯಂ ತಿರುವು, ಹಳೇ ವೈಶಾಲಿ ಗೇಟ್ ಹತ್ತಿರದ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ ಕಚೇರಿ ದೂರವಾಣಿ ಸಂಖ್ಯೆ 7022459064, 8105619020, 9945587060, 9964528212, 7019755147 ಗೆ ಸಂಪರ್ಕಿಸಬಹುದು

---

**ಪ್ರಮುಖ ಸುದ್ದಿ**

# ಬಿಜೆಪಿ ಸದಸ್ಯತ್ವ ಅಭಿಯಾನಕ್ಕೆ ಶಾಸಕ ಚಂದ್ರಪ್ಪ ಚಾಲನೆ

» **ಹೊಳಲ್ಕೆರೆ**

ಕಾರ್ಯಕರ್ತರು ವ್ಯರ್ಥವಾಗಿ ಕಾಲ ಕಳೆಯುವ ಬದಲು ಬೂತ್ ಮಟ್ಟದಲ್ಲಿ ಮನೆ ಮನೆಗೆ ಭೇಟಿ ನೀಡಿ ಸದಸ್ಯತ್ವ ಅಭಿಯಾನದಲ್ಲಿ ತೊಡಗಿಕೊಳ್ಳುವಂತೆ ಶಾಸಕ ಡಾ.ಎಂ.ಚಂದ್ರಪ್ಪ ಮನವಿ ಮಾಡಿದರು.

ಬಿಜೆಪಿ. ಕಚೇರಿಯಲ್ಲಿ ಶನಿವಾರ ಸದಸ್ಯತ್ವ ಅಭಿಯಾನ ಕಾರ್ಯಕರ್ತರ ಸಭೆ ಉದ್ಘಾಟಿಸಿ ಮಾತನಾಡಿದರು.

ಮುನ್ನೂರು ಸದಸ್ಯರನ್ನು ನೊಂದಾಯಿಸಿದರೆ ಜಿಲ್ಲೆ, ರಾಜ್ಯ, ರಾಷ್ಟ್ರೀಯ ಅಧ್ಯಕ್ಷ ಸ್ಥಾನಕ್ಕೆ ಸ್ಪರ್ಧಿಸಿದವರಿಗೆ ಮತದಾನ ಮಾಡುವ ಹಕ್ಕು ಸಿಗುತ್ತದೆ. ಸದಸ್ಯತ್ವ ಅಭಿಯಾನಕ್ಕೆ ಅಂತಹ ಶಕ್ತಿಯಿದೆ. ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಸದಸ್ಯತ್ವ ಅಭಿಯಾನ ತುಂಬಾ ಮುಖ್ಯ. ಪಕ್ಷದ ಕಾರ್ಯಕ್ರಮಗಳಲ್ಲಿ ತೊಡಗಿಕೊಂಡು ಕಷ್ಟಪಟ್ಟು ಕೆಲಸ ಮಾಡಿದರೆ ಒಂದಲ್ಲ ಒಂದು ದಿನ ನಾಯಕರುಗಳು ಗುರುತಿಸಿ ಅಧಿಕಾರ ನೀಡುತ್ತಾರೆ. ಒಂದು ಕಾಲದಲ್ಲಿ ಚಹಾ ಮಾರುತ್ತಿದ್ದ ವ್ಯಕ್ತಿ ಈಗ ದೇಶದ ಪ್ರಧಾನಿಯಾಗಿರುವುದೇ ಸಾಕ್ಷಿ ಎಂದು ಹೇಳಿದರು. ಅಮೇರಿಕಾ, ರಷ್ಯಾದಂತ ಬಲಶಾಲಿ ರಾಷ್ಟ್ರಗಳ ಅಧ್ಯಕ್ಷರು ನಮ್ಮ ದೇಶದ ಪ್ರಧಾನಿ ನರೇಂದ್ರಮೋದಿರವರ ಮಾತಿಗೆ ಗೌರವ ಕೊಡುತ್ತಾರೆ. ಪ್ರಪಂಚದಲ್ಲಿ ಎಲ್ಲಿಯಾದರೂ ಯುದ್ದವಾದರೆ ಅದನ್ನು ನಿಲ್ಲಿಸುವ ಶಕ್ತಿ ಸಾಮರ್ಥ್ಯ ಪ್ರಧಾನಿ ಮೋದಿಗಿದೆ. ಹಾಗಾಗಿ ಬಿಜೆಪಿ. ಪಕ್ಷದಲ್ಲಿ ಸದಸ್ಯರಾಗುವ ಮೂಲಕ ಸ್ಥಾನಮಾನ ಪಡೆದುಕೊಳ್ಳಿ ಎಂದು ಕರೆ ನೀಡಿದರು.



ಹೊಳಲ್ಕೆರೆ ಕ್ಷೇತ್ರಾದ್ಯಂತ ಕೆರೆ, ಕಟ್ಟೆ, ಚೆಕ್‌ಡ್ಯಾಂಗಳನ್ನು ಕಟ್ಟಿಸಿರುವುದರಿಂದ ನೀರು ತುಂಬಿ ತುಳುಕುತ್ತಿದೆ. ಉತ್ತಮ ಗುಣಮಟ್ಟದ ರಸ್ತೆ, ಶಾಲಾ–ಕಾಲೇಜು, ಹೈಟೆಕ್ ಆಸ್ಪತ್ರೆ, ಕ್ರೀಡಾಂಗಣ, ಈಜುಕೊಳ ನಿರ್ಮಿಸಿದ್ದೇನೆ. ಕಾರ್ಯಕರ್ತರು ಸಂತೋಷದಿಂದಿದ್ದಾರೆಂದರು.

ಶಿವಮೊಗ್ಗ ಶಾಸಕ ಚನ್ನಬಸಪ್ಪ ಮಾತನಾಡಿ ಸಂವಿಧಾನದ ಪ್ರಕಾರ ಸದಸ್ಯತ್ವ ಅಭಿಯಾನವಾಗಬೇಕು. ಸಾಮಾನ್ಯ ಸದಸ್ಯ ಸಕ್ರಿಯ ಸದಸ್ಯನಾಗಬೇಕಾದರೆ ಪ್ರತಿ ಮತಗಟ್ಟೆಯಲ್ಲಿ ಮೂವರು ಸದಸ್ಯರುಗಳನ್ನು ನೊಂದಾಯಿಸಬೇಕು. ಶಿವಮೊಗ್ಗ ವಿಧಾನಸಭಾ ಕ್ಷೇತ್ರದಲ್ಲಿ 65 ಸಾವಿರ ಸದಸ್ಯತ್ವ ನೊಂದಣಿಯಾಗಿದೆ. ನಮಗೆ ಗುರಿಯಿರುವುದು ಒಂದು ಲಕ್ಷ. ಮೊಬೈಲ್‌ನಲ್ಲಿ ಸದಸ್ಯತ್ವ ನೊಂದಣಿ ಮಾಡಬೇಕಾಗಿರುವುದರಿಂದ ಮೊದಲು ಮೊಬೈಲ್ ಬಳಸುವುದನ್ನು ಸರಿಯಾಗಿ ಕಲಿತಿರಬೇಕು. ಅದಕ್ಕಾಗಿ ಬಿಜೆಪಿ. ಪರವಾಗಿರುವ ಯುವಕರನ್ನು ಜೋಡಿಸಿಕೊಂಡು ಸದಸ್ಯತ್ವ ಅಭಿಯಾನದಲ್ಲಿ ತೊಡಗಿಕೊಂಡರೆ ನೊಂದಣಿ ಸುಲಭವಾಗುತ್ತದೆ. ಸದಸ್ಯತ್ವ ಅಭಿಯಾನದಲ್ಲಿ ಸಕ್ರಿಯರಾಗದಿದ್ದರೆ ಹೊಳಲ್ಕೆರೆ ಕ್ಷೇತ್ರ ಅಭಿಯಾನದಲ್ಲಿ ಹಿಂದುಳಿಯುತ್ತದೆ. ರಾಜ್ಯದ ಸದಸ್ಯತ್ವ ಅಭಿಯಾನದಲ್ಲಿ ಹೊಳಲ್ಕೆರೆ ಹೆಸರು ಮೇಲಿರಬೇಕಾದರೆ ಸದಸ್ಯತ್ವ ಅಭಿಯಾನವನ್ನು ಕಡೆಗಣಿಸಬೇಡಿ ಎಂದು ಕಾರ್ಯಕರ್ತರಿಗೆ ಕಿವಿಮಾತು ಹೇಳಿದರು.

ಬಿಜೆಪಿ. ರಾಜ್ಯ ರೈತ ಮೋರ್ಚಾ ಕಾರ್ಯದರ್ಶಿ ಮಲ್ಲಿಕಾರ್ಜುನ್, ಬಿಜೆಪಿ. ಮಂಡಲ ಅಧ್ಯಕ್ಷ ಸಿದ್ದೇಶ್, ಭರಮಸಾಗರ ಬಿಜೆಪಿ.ಮಂಡಲ ಅಧ್ಯಕ್ಷ ಶೈಲೇಶ್, ಪುರಸಭೆ ಸದಸ್ಯ ಆರ್.ಎ.ಅಶೋಕ್, ತಾಲ್ಲೂಕು ಬಿಜೆಪಿ.ಪ್ರಧಾನ ಕಾರ್ಯದರ್ಶಿ ರೂಪಸುರೇಶ್, ಡಿ.ಸಿ.ಮೋಹನ್, ಹೊಳಲ್ಕೆರೆಮತ್ತುಭರಮಸಾಗರಮಂಡಲದ ಪದಾಧಿಕಾರಿಗಳು ಕಾರ್ಯಕತರು ಸಭೆಯಲ್ಲಿ ಭಾಗವಹಿಸಿದ್ದರು.

## ಫಾಸ್ಟ್ ನ್ಯೂಸ್

### ತರಾಸು ರಂಗಮಂದಿರದಲ್ಲಿ ಸಂಗೀತೋತ್ಸವ ನಾಳೆ

» **ಚಿತ್ರದುರ್ಗ**

ಮದಕರಿನಾಯಕ ಸಾಂಸ್ಕೃತಿಕ ಕೇಂದ್ರ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ ನ. 19 ರ ಮಂಗಳವಾರದಂದು ಸಂಜೆ 6 ಗಂಟೆಗೆ ನಗರದ ತರಾಸು ರಂಗಮಂದಿರದಲ್ಲಿ ಸಂಗೀತೋತ್ಸವ ಕಾರ್ಯಕ್ರಮ ನಡೆಯಲಿದೆ ಎಂದು ಮದಕರಿನಾಯಕ ಸಾಂಸ್ಕೃತಿಕ ಕೇಂದ್ರದ ಅಧ್ಯಕ್ಷರಾದ ಗೋಪಾಲಸ್ವಾಮಿ ನಾಯಕ್ ತಿಳಿಸಿದ್ದಾರೆ. ಕಾರ್ಯಕ್ರಮವನ್ನು ಅಪರ ಜಿಲ್ಲಾಧಿಕಾರಿಗಳಾದ ಬಿ.ಟಿ.ಕುಮಾರಸ್ವಾಮಿ ಉದ್ಘಾಟಿಸಲಿದ್ದಾರೆ. ನಗರಸಭೆಯ ಮಾಜಿ ಅಧ್ಯಕ್ಷರಾದ ಬಿ.ಕಾಂತರಾಜ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಎಸ್.ಕೆ. ಮಲ್ಲಿಕಾರ್ಜುನ್, ಹಿರಿಯ ಸಂಗೀತ ಕಲಾವಿದರಾದ ಎಸ್.ವಿ.ಗುರುಮೂರ್ತಿ, ಹಿಂದೂಸ್ತಾನಿ ಶಾಸ್ತ್ರಿಯ ಸಂಗೀತ ಕಲಾವಿದರಾದ ಸುಜಿತ್, ವಯೋಲಿನ್‌ವಾದ ಕಲಾವಿದರಾದ ಶ್ರೀಮತಿ ಭವ್ಯರಾಣಿರವರು ಆಗಮಿಸಲಿದ್ದಾರೆ. ಇದೇ ಸಂದರ್ಭದಲ್ಲಿ ಕನ್ನಡ ರಾಜೋತ್ಸವ ಪ್ರಶಸ್ತಿ ಪುರಸ್ಕೃತರಾದ ಹುಣಸೇಕಟ್ಟೆ ಗ್ರಾಮದ ಓಬಳೇಶ್ ರವರನ್ನು ಸನ್ಮಾನಿಸಲಾಗುವುದು. ಕಾರ್ಯಕ್ರಮದಲ್ಲಿ ಶಾಸ್ತಿಯ ಸಂಗೀತ, ಹಿಂದೂಸ್ತಾನಿ ಸಂಗೀತ, ವಯೋಲಿನ್ ವಾದನ, ಜಾನಪದ ಸಂಗೀತ, ತತ್ವ ಪದಗಳು, ವಚನ ಸಂಗೀತ, ಸುಗಮ ಸಂಗೀತ, ಭಕ್ತಿ ಸಂಗೀತ, ಕನ್ನಡ ಗೀತ ಗಾಯನ ಹಾಗೂ ರಂಗ ಗೀತೆಗಳ ಗಾಯನ ನಡೆಯಲಿದೆ.


### ಶಿಮೂಲ್‌ನಿಂದ ಆರ್ಥಿಕ ನೆರವು



» **ಚಳ್ಳಕೆರೆ**

ಶಿವಮೊಗ್ಗ ಹಾಲುಒಕ್ಕೂಟ ಇಂದು ರಾಜ್ಯದಲ್ಲಿ ಹೆಚ್ಚು ಹಾಲುಉತ್ಪಾದನೆಯನ್ನು ಶೇಖರಣೆ ಮಾಡುವ ಘಟಕವಾಗಿ ಪರಿವರ್ತನೆಯಾಗಿದೆ. ಘಟಕ ಉತ್ತಮವಾಗಿ ಕಾರ್ಯನಿರ್ವಹಿಸಲು ಗ್ರಾಮೀಣ ಭಾಗದ ಸಹಕಾರಿ ಸಂಘಗಳ ಪಾತ್ರ ಹಿರಿದು. ಹಾಲುಉತ್ಪಾದನೆಯಲ್ಲಿ ತೊಡಗಿ ಮರಣಹೊಂದಿದ ಹಾಲುಉತ್ಪಾದಕರ ಸಂಘದ ಕುಟುಂಬಗಳಿಗೆ ಒಕ್ಕೂಟ ಆರ್ಥಿಕ ನೆರವು ನೀಡುವ ಮೂಲಕ ಅವರ ಸೇವೆಯನ್ನು ಗೌರವಿಸುತ್ತದೆ ಎಂದು ಶಿವಮೊಗ್ಗಹಾಲುಒಕ್ಕೂಟದ ಜಿಲ್ಲಾ ನಿರ್ದೇಶಕ ಬಿ.ಸಿ.ಸಂಜೀವಮೂರ್ತಿ ತಿಳಿಸಿದರು.
ಅವರು, ತಾಲ್ಲೂಕಿನ ಗೊರ್ಲಕಟ್ಟೆ ಹಾಲುಉತ್ಪಾದಕರ ಸಹಕಾರ ಸಂಘದ ಮಾಜಿ ಕಾರ್ಯದರ್ಶಿ ವೆಂಕಟೇಶ್ ಅನಾರೋಗ್ಯ ಹಿನ್ನೆಲೆಯಲ್ಲಿ ನಿಧನರಾಗಿದ್ದು ಅವರ ಪತ್ನಿ ಮಂಜುಳಾರವರಿಗೆ ಒಕ್ಕೂಟದಿಂದ ಒಂದು ಲಕ್ಷದ ಚೆಕನ್ನು ವಿತರಿಸಿ ಮಾತನಾಡಿದರು. ಚೆಕನ್ನು ಸ್ವೀಕರಿಸಿದ ಪತ್ನಿ ಮಂಜುಳಾ ಶಿವಮೊಗ್ಗ ಹಾಲುಒಕ್ಕೂಟದ ಸಹಕಾರಕ್ಕೆ ಕೃತಜ್ಞತೆ ಸಲ್ಲಿಸಿದರು.
ಪ್ರಭಾರ ಕಾರ್ಯದರ್ಶಿ ಮಹಂತೇಶ್, ಉಪಾಧ್ಯಕ್ಷ ಜಗನ್ನಾಥ, ಮಾಜಿ ಅದ್ಯಕ್ಷ ಟಿ.ನಾಗರಾಜ, ವಿಸ್ತಾರಣಾಧಿಕಾರಿ ಎಸ್.ಜಿ.ಕೃಷ್ಣಕುಮಾರ್, ಗ್ರಾಮದ ಮುಖಂಡ ಶಿವಣ್ಣ, ಸಿದ್ದರಾಮಯ್ಯ, ಗ್ರಾಮ ಪಂಚಾಯಿತಿ ಸದಸ್ಯ ಸಿ.ರವಿ, ರಮೇಶ್ ಮುಂತಾದವರು ಉಪಸ್ಥಿತರಿದ್ದರು.

### ನಂಜನಗೂಡು ರಾಯರ ಮಠದಲ್ಲಿ ಕಾರ್ತಿಕ ಮಾಸದ ಮಹಾಪೂಜೆ: ನೂರಾರು ಭಕ್ತರು ಬಾಗಿ



» **ಚಳ್ಳಕೆರೆ**

ವಾಲ್ಮೀಕಿ ನಗರದ ನಂಜನಗೂಡು ಶ್ರೀರಾಘವೇಂದ್ರಸ್ವಾಮಿ ಮಠದಲ್ಲಿ ಕಾರ್ತಿಕಮಾಸದ ಹಿನ್ನೆಲೆಯಲ್ಲಿ ವಿಶೇಷ ಕಾರ್ತಿಕಮಹಾಪೂಜೆಯನ್ನು ಭಕ್ತಿಶ್ರದ್ದೆಯಿಂದ ನಡೆಸಲಾಯಿತು. ಶ್ರೀಗಳ ಬೃಂದಾವನದ ಆಕಾರದಲ್ಲಿ ಮಹಿಳಾ ಭಕ್ತರು ರಂಗೋಲಿ ಮೂಲಕ ನಿರ್ಮಿಸಿದ ಮಹಾಮಂಟಪ ಹಾಗೂ ರಾಯರ ಪ್ರಕಾರದ ಸುತ್ತಲು ಸಾವಿರಾರು ದೀಪಗಳನ್ನು ಬೆಳಗಿಸಿ ಕಾರ್ತಿಕ ಮಾಸದ ಪೂಜನೆಯನ್ನು ನಡೆಸಲಾಯಿತು. ಇದೇ ಸಂದರ್ಭದಲ್ಲಿ ರಾಯರ ಸನ್ನಿಧಿಯಲ್ಲಿ ವಿಶೇಷ ಸತ್ಯನಾರಾಯಣಪೂಜೆಯನ್ನು ಹಮ್ಮಿಕೊಳ್ಳಲಾಗಿತ್ತು. ಸತ್ಯನಾರಾಯಣಪೂಜೆ ಮತ್ತು ಕಾರ್ತಿಕ ಮಾಸದ ಪೂಜೆಗೆ ಆಗಮಿಸಿದ ನೂರಾರು ಭಕ್ತರಿಗೆ ಪ್ರಸಾದ ವಿತರಣೆ ಮಾಡಲಾಯಿತು. ರಾಯರದ ಮಠದ ವಿಚಾರಣಕರ್ತರಾದ ಶ್ರೀನಾಥಭಟ್, ಗುರುನಾಥಭಟ್, ವ್ಯವಸ್ಥಾಪಕ ಶ್ರೀನಿವಾಸ್, ಎಂ.ಪಿ.ಗುರುರಾಜ್, ಕಿಶೋರ್, ಜಿ.ಕೃಷ್ಣಮೂರ್ತಿ, ಎಂ.ಸತ್ಯನಾರಾಯಣರಾವ್, ಅಮರನಾಥಗುಪ್ತ ಭಾಗವಹಿಸಿದ್ದರು.

## ಪ್ರತಿಭೆ ಅನಾವರಣಕ್ಕೆ ಉತ್ತಮ ವೇದಿಕೆ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಲು ಕರೆ

# ಡಿ.7 ರಂದು ಜಿಲ್ಲಾ ಮಟ್ಟದ ಯುವಜನೋತ್ಸವ

» **ಚಿತ್ರದುರ್ಗ**

ಮುಂಬರುವ ಡಿ.7 ರಂದು ನಗರದ ಸರ್ಕಾರಿ ವಿಜ್ಞಾನ ಕಾಲೇಜಿನಲ್ಲಿ ಜಿಲ್ಲಾ ಮಟ್ಟದ ಯುವಜನೋತ್ಸವ ಕಾರ್ಯಕ್ರಮ ಆಯೋಜಿಸಲಾಗಿದೆ. ಇದು ಪ್ರತಿಭೆ ಅನಾವರಣಕ್ಕೆ ಉತ್ತಮ ವೇದಿಕೆಯಾಗಿದ್ದು, ಯುವಕ ಯುವತಿಯರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಅಪರ ಜಿಲ್ಲಾಧಿಕಾರಿ ಟಿ.ಬಿ.ಕುಮಾರಸ್ವಾಮಿ ಕರೆ ನೀಡಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಶನಿವಾರ ಈ ಕುರಿತು ಜರುಗಿದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜ.12 ರಂದು ಸ್ವಾಮಿ ವಿವೇಕಾನಂದ ಜನ್ಮ ದಿನಾಚರಣೆ ಅಂಗವಾಗಿ ರಾಜ್ಯ ಹಾಗೂ ರಾಷ್ಟ್ರ ಮಟ್ಟದಲ್ಲಿ ಯುವಜನೋತ್ಸವ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತದೆ. ಈ ಹಿನ್ನಲೆಯಲ್ಲಿ ಜಿಲ್ಲಾ ಮಟ್ಟದಲ್ಲಿ ಭಾಗವಹಿಸಿ ಉತ್ತಮ ಪ್ರದರ್ಶನ ನೀಡಿ ವಿಜೇತರಾದವರಿಗೆ ನಗದು ಬಹುಮಾನ ಹಾಗೂ ಪುರಸ್ಕಾರ ನೀಡುವುದರ ಜೊತೆಗೆ, ರಾಜ್ಯ ಮಟ್ಟದ ಯುವಜನೋತ್ಸವದಲ್ಲಿ ಪಾಲ್ಗೊಳ್ಳಲು ಆಯ್ಕೆ ಮಾಡಲಾಗುವುದು. ಜಾನಪದ ಗೀತೆ, ನೃತ್ಯ, ಕಥೆ ಹಾಗೂ ಕವನ ಬರಹ, ಭಾಷಣ, ಚಿತ್ರಕಲೆ, ವಿಜ್ಞಾನ ಮೇಳ, ಮೊಬೈಲ್ ಫೋಟೊಗ್ರಫಿ ಹಾಗೂ ಉತ್ತಮ ಕರಕುಶಲ ವಸ್ತು ಪ್ರದರ್ಶನ, ಸಿದ್ದಉಡುಪು ಹಾಗೂ ಆಹಾರ ಸಂಸ್ಕರಣೆ ವಿಭಾಗಗಳಲ್ಲಿ ಸ್ಪರ್ಧೆಗಳು ಜರುಗಲಿವೆ. ಚಿತ್ರದುರ್ಗ ಜಿಲ್ಲೆಯವರು ಅಥವಾ ಜಿಲ್ಲೆಯಲ್ಲಿ ವ್ಯಾಸಂಗ ಮಾಡುತ್ತಿರುವ 15 ವರ್ಷ ಮೇಲ್ಪಟ್ಟ ಹಾಗೂ ಸೆಪ್ಟಂಬರ್



ಅಂತ್ಯಕ್ಕೆ 29 ವರ್ಷದ ಒಳಗಿರುವವರು ಸ್ಪರ್ಧೆಗಳಲ್ಲಿ ಭಾಗವಹಿಸಬಹುದು ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ತಿಳಿಸಿದರು.

ವಸ್ತು ಪ್ರದರ್ಶನ ಆಯೋಜನೆ : ಯುವಜನೋತ್ಸವ ಅಂಗವಾಗಿ ವಸ್ತು ಪ್ರದರ್ಶನಮಳಿಗೆಗಳುತೆರೆಯಲಾಗುವುದು. ಯುವ ಜನರಿಗೆ ಉಪಯುಕ್ತವಾಗುವಂತೆ, ಜಿಲ್ಲೆಯಲ್ಲಿ ಸ್ವಯಂ ಉದ್ಯೋಗ ಹಾಗೂ ಉದ್ದಿಮೆ ಸ್ಥಾಪಿಸಿ ಸಫಲತೆ ಕಂಡವರ ಮಾಹಿತಿ ನೀಡುವಂತೆ ವಸ್ತು ಪ್ರದರ್ಶನ ಆಯೋಜಿಸಬೇಕು. ಕೃಷಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ತೋಟಗಾರಿಕೆ, ಕೌಶಲ್ಯಾಭಿವೃದ್ಧಿ, ಅಂಚೆ ಇಲಾಖೆಯಿಂದ ಮಳಿಗೆಗಳನ್ನು ತೆರಯುವಂತೆ ಅಪರ ಜಿಲ್ಲಾಧಿಕಾರಿಗಳು ಸಭೆಯಲ್ಲಿ ಸೂಚಿಸಿದರು.

ಜಾನಪದ ಗೀತೆ ಹಾಗೂ ನೃತ್ಯ ವಿಭಾಗದಲ್ಲಿ ವೈಯಕ್ತಿಕ ಹಾಗೂ ಗುಂಪಾಗಿ ಸ್ಪರ್ಧಿಸಹುದು. ಚಿತ್ರಗೀತೆಗಳನ್ನು ಹಾಡಲು ಅವಕಾಶ ಇರುದಿಲ್ಲ. ಗುಂಪು ವಿಭಾಗದಲ್ಲಿ ಗರಿಷ್ಠ 10 ಜನರು ಭಾಗವಹಿಸಬಹುದು. ಈ ಬಾರಿ ಪಂಚಪ್ರಾಣ ಎಂಬ ವಿಷಯದೊಂದಿಗೆ ಯುವಜನೋತ್ಸವ ಆಚರಿಸಲಾಗುತ್ತಿದ್ದು, ಕಥೆ, ಕವನ ಹಾಗೂ ಭಾಷಣ ಸ್ಪರ್ಧೆಗಳು ಈ ವಿಷಯವನ್ನು ಆಧಾರಿಸಿರಲಿವೆ. ಚಿತ್ರಕಲೆಯಲ್ಲಿ ಒಬ್ಬ ಸ್ಪರ್ಧಿಗೆ ಒಂದು ರಚನೆ ಮಾತ್ರ ಅವಕಾಶವಿರುತ್ತದೆ. ವಿಜ್ಞಾನ ಮೇಳದಲ್ಲಿ ಗುಂಪು ಹಾಗೂ ವೈಯಕ್ತಿಕವಾಗಿ ಭಾಗವಹಿಸಬಹುದು. ಮೊಬೈಲ್ ಪೋಟೋಗ್ರಫಿ, ಉತ್ತಮ ಕರಕುಶಲ ವಸ್ತು ಪ್ರದರ್ಶನ, ಸಿದ್ದಉಡುಪು ಹಾಗೂ ಆಹಾರ ಸಂಸ್ಕರಣೆ ವಿಭಾಗಗಳಲ್ಲಿ ಸೃಜನಶೀಲನೆ, ನಾವಿನ್ಯತೆ, ಕ್ರೀಯಾಶೀಲತೆ ಹಾಗೂ ತಾಂತ್ರಿಕ ಅಂಶಗಳಿಗೆ ಹೆಚ್ಚಿನ ಒತ್ತು ನೀಡಿ ವಿಜೇತರನ್ನು ಆಯ್ಕೆ ಮಾಡಲಾಗುವುದು. ಅಭ್ಯರ್ಥಿಗಳು, ವಾಸಸ್ಥಳ ದಢೀಕರಣ ಅಥವಾ ವಿದ್ಯಾಸಂಸ್ಥೆಗಳಿಂದ ಪಡೆದ ದೃಢೀಕರಣ ಪತ್ರಗಳೊಂದಗೆ ಸ್ಪರ್ಧೆಗಳಲ್ಲಿ ಭಾಗಹಿಸಬೇಕು. ವಯಸ್ಸಿನ ದೃಢೀಕರಣಕ್ಕೆ ಎಸ್.ಎಸ್.ಎಲ್.ಸಿ ಅಂಕಪಟ್ಟಿ, ಮುಖ್ಯೋಪಾಧ್ಯಾಯರ ದೃಢೀಕರಣಗಳ ಜೊತೆಗೆ ಮತದಾರ ಗುರುತಿನ ಚೀಟಿ, ಆಧಾರ್‌ಗಳನ್ನು ಪರಿಗಣಿಸಲಾಗುವುದು ಎಂದು ಯುವಜನ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕಿ ಸುಚೇತಾ ನೆಲವಗಿ ಸಭೆಯಲ್ಲಿ ತಿಳಿಸಿದರು.ನೆಹರು ಯುವ ಕೇಂದ್ರದ ಯುವಜನಾಧಿಕಾರಿ ಸುಹಾಸ್ ಮಾತನಾಡಿ, ಪ್ರತಿ ಸ್ಪರ್ಧೆಯಲ್ಲಿ ಪ್ರಥಮ, ದ್ವೀತಿಯ ಹಾಗೂ ತೃತೀಯ ಸ್ಥಾನಗಳಲ್ಲಿ ವಿಜೇತರನ್ನು ಆಯ್ಕೆ ಮಾಡಲಾಗುವುದು. ನಗದು ಬಹುಮಾನೊಂದಿಗೆ ಪುರಸ್ಕಾರ ಮಾಡಲಾಗುವುದು. ಯುವಜನೋತ್ಸವಕ್ಕೆ ಆಗಮಿಸುವ ಸ್ಪರ್ಧಿಗಳಿಗೆ ಮಧ್ಯಾಹ್ನದ ಉಪಹಾರ ವ್ಯವಸ್ಥೆ ಇರಲಿದೆ. ಇದರೊಂದಿಗೆ ಜಿಲ್ಲೆಯ ವಿವಿಧ ಭಾಗಗಳಿಂದ ಆಗಮಿಸುವ ಸ್ಪರ್ಧಿಗಳಿಗೆ ಪ್ರಯಾಣಭತ್ಯೆ ನೀಡಲಾಗುವುದು. ಆಸಕ್ತರು ಒಥಿಖಿಚಿಡಿಚಿಣಕಠಡಿಣಚಿಟ ನಲ್ಲಿ ನೊಂದಾಯಿಸಿಕೊಳ್ಳಬಹುದು. ಹೆಚ್ಚಿನ ಮಾಹಿತಿಗಾಗಿ ಮೊಬೈಲ್ ಸಂಖ್ಯೆ 7760028435 ಹಾಗೂ 9945038684ಗೆ ಕರೆ ಮಾಡಬಹುದು ಎಂದು ಮಾಹಿತಿ ನೀಡಿದರು. ಜಿಲ್ಲೆಯ ಎಲ್ಲಾ ಹೈಸ್ಕೂಲ್, ಪಿಯು, ಐಟಿಐ, ಡಿಪ್ಲೊಮೋ, ಪದವಿ, ಇಂಜಿಯರಿಂಗ್ ಹಾಗೂ ವೈದ್ಯಕೀಯ ಕಾಲೇಜುಗಳಲ್ಲಿ ವಿದ್ಯಾರ್ಥಿಗಳಿಗೆ ಯುವಜನೋತ್ಸವದ ಬಗ್ಗೆ ಮಾಹಿತಿ ನೀಡಿ, ಸ್ಪರ್ಧೆಯಲ್ಲಿ ಭಾಗವಹಿಸಲು ಪ್ರೇರೆಪಿಸಬೇಕು. ಆಯಾ ವಿಷಯಗಳಲ್ಲಿ ಸಂಪನ್ಮೂಲ ವ್ಯಕ್ತಿಗಳಾದವರನ್ನು ಸ್ಪರ್ಧೆಗಳಲ್ಲಿ ತೀರ್ಪುಗಾರನ್ನಾಗಿಸಬೇಕು. ಎಲ್ಲಾ ಕಾಲೇಜುಗಳ ಪ್ರಾಂಶುಪಾಲರು ಯುವಜನೋತ್ಸವ ಆಯೋಜನೆಯಲ್ಲಿ ಅಧಿಕಾರಿಗಳಿಗೆ ಸಹಕರಿಸುವಂತೆ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಸೂಚಿಸಿದರು.

ಸಭೆಯಲ್ಲಿ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಅಧಿಕಾರಿ ಪವಿತ್ರ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಎಸ್.ಕೆ.ಮಲ್ಲಿಕಾರ್ಜುನ್, ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿ ಹೇಮಣ್ಣ ಸೇರಿದಂತೆ ವಿವಿಧ ಕಾಲೇಜುಗಳು ಪ್ರಾಂಶುಪಾಲರು ಇದ್ದರು.

## ವೆಂಕಟೇಶ್ವರ ಪ್ರಥಮ ದರ್ಜೆ ಕಾಲೇಜಿನ ಪ್ರೇಶರ್ಸ್ ಡೇ

» **ಚಿತ್ರದುರ್ಗ**

ಪದವಿಯ ಜೊತೆ ಕೌಶಲ್ಯಾಧಾರಿತ ಶಿಕ್ಷಣ ಕಲಿಯದಿದ್ದರೆ ಜೀವನದಲ್ಲಿ ಏನನ್ನು ಸಾಧಿಸಲು ಆಗುವುದಿಲ್ಲ ಎಂದು ದೇವರಾಜ್ ಅರಸ್ ಶಿಕ್ಷಣ ಸಂಸ್ಥೆ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಎಂ.ಸಿ.ರಘುಚಂದನ್ ಹೇಳಿದರು.

ವೆಂಕಟೇಶ್ವರ ಪ್ರಥಮ ದರ್ಜೆ ಕಾಲೇಜಿನ ಪ್ರೇಶರ್ಸ್ ಡೇ ಉದ್ಘಾಟಿಸಿ ಮಾತನಾಡಿದರು. ವಿದ್ಯಾರ್ಥಿ ಜೀವನದಲ್ಲಿ ಗಟ್ಟಿ ನಿರ್ಧಾರ, ಸ್ಪಷ್ಟವಾದ ಗುರಿಯಿದ್ದಾಗ ಮಾತ್ರ ಸಮಾಜದಲ್ಲಿ ಸಂಬಂಧಿಗಳು, ಬಂದು–ಬಳಗದವರ ಎದುರು ಸ್ವಾಭಿಮಾನಿಯಾಗಿ ಬದುಕಿ ನಿಮ್ಮನ್ನು ಸಾಕಿ ಸಲಹಿದ ತಂದೆ–ತಾಯಿಗಳನ್ನು ಜೋಪಾನವಾಗಿ ನೋಡಿಕೊಳ್ಳಬಹುದು. ಕೌಶಲ್ಯಯುತ ಶಿಕ್ಷಣದಿಂದ ಮಾತ್ರ ಸ್ವಂತ ಬದುಕು ಕಟ್ಟಿಕೊಳ್ಳಬಹುದು. ಚಿತ್ರದುರ್ಗ ಜಿಲ್ಲೆ ಮೊದಲೆ ಬರಪೀಡಿತ ಪ್ರದೇಶ. ಇಲ್ಲಿ ಯಾವುದೇ ನೀರಾವರಿ ಕೈಗಾರಿಕೆಗಳಿಲ್ಲ. ಇಂಜಿನಿಯರಿಂಗ್, ವೈದ್ಯಕೀಯ ಶಿಕ್ಷಣ ಪಡೆದವರು ದೊಡ್ಡ ದೊಡ್ಡ ನಗರಗಳಿಗೆ ಹೋಗಿ ನೆಲೆಸುತ್ತಾರೆ. ನೀವುಗಳು ಕಷ್ಟಪಟ್ಟು ಓದಿ ನ್ಯಾಯವಾಗಿ ದುಡಿದು ಉತ್ತಮ ಬದುಕು ಕಂಡುಕೊಳ್ಳಿ ಎಂದು ಹೇಳಿದರು.

ಶಿಕ್ಷಣದ ಜೊತೆ ಕಂಪ್ಯೂಟರ್, ಟ್ಯಾಲಿ ಕಲಿತರೆ ದುಡಿಮೆಯ ಮಾರ್ಗ ಕಂಡುಕೊಳ್ಳಬಹುದು.



ದುಡಿಯುವ ಕೈಗಳಿಗೆ ಎಲ್ಲರೂ ನಮಸ್ಕಾರ ಹೊಡೆಯುತ್ತಾರೆ. ದುಡಿಯದೆ ಸೋಮಾರಿಗಳು ಮತ್ತೊಬ್ಬರ ಮುಂದೆ ಕೈಚಾಚಿ ಬೇಡಬೇಕಾಗುತ್ತದೆ. ಅದಕ್ಕಾಗಿ 21–22 ವರ್ಷದೊಳಗೆ ಪದವಿ ಪಡೆದು ಸಮಾಜದಲ್ಲಿ ಉತ್ತಮ ನಾಗರೀಕರಿಗೆ ಬಾಳುವ ನಿರ್ಧಾರ ಮಾಡಬೇಕೆಂದು ತಿಳಿಸಿದರು. ವೆಂಕಟೇಶ್ವರ ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲರಾದ ಡಾ.ಎ.ಜೆ.ಶಿವಕುಮಾರ್, ಬಿ.ಇ.ಡಿ.ಕಾಲೇಜು ಪ್ರಾಚಾರ್ಯರಾದ ಡಾ.ಬಿ.ಸಿ. ಅನಂತರಾಮು, ದೇವರಾಜ್ ಅರಸ್ ಶಿಕ್ಷಣ ಸಂಸ್ಥೆಯ ಚೀಫ್ ಕೋ–ಆರ್ಡಿನೇಟರ್ ರಾಜು ಆರ್.ಎಸ್. ಪ್ರಕೃತಿ ಆಯುರ್ವೇದಿಕ್ ಮೆಡಿಕಲ್ ಕಾಲೇಜು ಮತ್ತು ಆಸ್ಪತ್ರೆಯ ಪ್ರಾಂಶುಪಾಲರಾದ ಡಾ.ಎಸ್.ಬಿ. ನವಾಜ್ ವೇದಿಕೆಯಲ್ಲಿದ್ದರು.

## ಅತ್ಯುತ್ತಮ ಸಹಕಾರ ಬ್ಯಾಂಕ್ ಪ್ರಶಸ್ತಿ ಮುಡಿಗೇರಿಸಿಕೊಂಡ ನಗರದ ಮರ್ಚೆಂಟ್ಸ್ ಬ್ಯಾಂಕ್



» **ಚಿತ್ರದುರ್ಗ**

ನಗರದ ಚಳ್ಳಕೆರೆ ರಸ್ತೆಯಲ್ಲಿರುವ ಶ್ರೀರಾಮ ಕಲ್ಯಾಣ ಮಂಟಪದಲ್ಲಿ ಅಖಿಲ ಭಾರತ 71ನೇ ಸಹಕಾರ ಸಪ್ತಾಹ ನಡೆಯಿತು. ಇದೇ ಸಂದರ್ಭದಲ್ಲಿ ನಗರದ ದಿ ಮರ್ಚೆಂಟ್ಸ್ ಸೌಹಾರ್ದ ಸಹಕಾರ ಬ್ಯಾಂಕನ್ನುರಾಜ್ಯದಅತ್ಯುತ್ತಮ ಸಹಕಾರ ಬ್ಯಾಂಕೆಂದು ಗುರುತಿಸಿ, ಪ್ರಶಸ್ತಿ ನೀಡಲಾಯಿತು.ಬ್ಯಾಂಕಿನ ಆಡಳಿತ ಮಂಡಳಿ ಪರವಾಗಿ ಬ್ಯಾಂಕಿನ ನಿರ್ದೇಶಕರಘುರಾಮರೆಡ್ಡಿ, ಬ್ಯಾಂಕಿನ ಸಿಬ್ಬಂದಿ ಪರವಾಗಿ ಬ್ಯಾಂಕಿನ ಮುಖ್ಯಕಾರ್ಯ ನಿರ್ವಹಣಾಧಿಕಾರಿಕೆ.ಆರ್. ಮಲ್ಲಿಕಾರ್ಜುನಅವರಿಗೆ ಪ್ರಶಸ್ತಿ ಫಲಕ, ಪ್ರಶಸ್ತಿ ಪತ್ರ ನೀಡಿ ಸನ್ಮಾನಿಸಲಾಯಿತು. ಬ್ಯಾಂಕುಇದುವರೆಗೂ ಪಡೆದಿರುವ ಪ್ರಶಂಸೆಗಳ ಸಾಲಿಗೆ ಅತ್ಯುತ್ತಮ ಸಹಕಾರ ಪ್ರಶಸ್ತಿ ಪಡೆಯುವುದರೊಂದಿಗೆ ಈ ಪ್ರಶಸ್ತಿಯನ್ನು ಮುಡಿಗೇರಿಸಿಕೊಳ್ಳುವ ಮೂಲಕ ಗರಿ ಮೂಡಿದಂತಾಗಿದೆ.



## ಗ್ರಂಥಾಲಯ ಸಪ್ತಾಹ

**ಚಳ್ಳಕೆರೆ:** ಪ್ರತಿವರ್ಷದಂತೆ ಈ ವರ್ಷವೂ ನಗರ ಶ್ರೀಕೃಷ್ಣರಾಜೇಂದ್ರ ಸಾರ್ವಜನಿಕ ಗ್ರಂಥಾಲಯದಲ್ಲಿ ಗ್ರಂಥಾಲಯ ಸಪ್ತಾಹ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು. ಚಿಂತಕ, ಬರಹಗಾರ ಮೈತ್ರಿದ್ಯಾಮಣ್ಣ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿ, ಗ್ರಂಥಾಲಯಗಳು ಇಂದು ಜ್ಞಾನವನ್ನು ನೀಡುವ ಕೇಂದ್ರಗಳಾಗಿವೆ. ಪ್ರತಿಯೊಬ್ಬ ವ್ಯಕ್ತಿಯೂ ಗ್ರಂಥಾಲಯಕ್ಕೆ ಭೇಟಿ ನೀಡಿ ಇಲ್ಲಿನ ವಿವಿಧ ವಿಷಯಗಳ ಪುಸ್ತಕ, ದಿನಪತ್ರಿಕೆಗಳ ಮೂಲಕ ಹಲವಾರು ವಿಷಯಗಳನ್ನು ತಿಳಿಯುವ ವ್ಯವಸ್ಥೆ ಮಾಡಲಾಗಿದೆ.

**ಪ್ರಮುಖ ಸುದ್ದಿ**

# ನಮ್ಮ ವಿದ್ಯಾಪೀಠ ಕಾಲೇಜು ಮಧ್ಯಮ ವರ್ಗದ ಆಶಕಿರಣ

» **ಚಿತ್ರದುರ್ಗ**

ನಮ್ಮ ವಿದ್ಯಾಪೀಠದ ಕಾನೂನು ಕಾಲೇಜು ಗ್ರಾಮೀಣ, ಬಡ ಮಧ್ಯಮ ವರ್ಗದ ವಿದ್ಯಾರ್ಥಿಗಳಿಗೆ ಆಶಾಕಿರಣವಾಗಿದೆ. ಅದರ ಪ್ರಯೋಜನವನ್ನು ವಿದ್ಯಾರ್ಥಿಗಳು ಪಡೆದುಕೊಂಡು ಸಮಾಜದ ಹಿತ ರಕ್ಷಕರಾಗಿ ಕರ್ತವ್ಯ ನಿರ್ವಹಿಸಬೇಕಿದೆ ಎಂದು ಶ್ರೀ ಜಗದ್ಗುರು ಮುರುಘರಾಜೇಂದ್ರ ಬೃಹನ್ಮಠದ ಹಾಗೂ ಎಸ್ ಜೆ ಎಂ ವಿದ್ಯಾಪೀಠದ ಆಡಳಿತ ಮಂಡಳಿ ಸದಸ್ಯರಾದಡಾ. ಬಸವಕುಮಾರ ಸ್ವಾಮಿಗಳು ಕರೆ ನೀಡಿದರು.

ಶ್ರೀಗಳವರು ನಗರದ ಎಸ್.ಜೆ. ಎಂ ಕಾನೂನು ಮಹಾವಿದ್ಯಾಲಯದಲ್ಲಿ ನಡೆದ ಪ್ರಥಮ ವರ್ಷದ ಕಾನೂನು ಪದವಿ ವಿದ್ಯಾರ್ಥಿಗಳ ಸ್ವಾಗತ ಸಮಾರಂಭ ರಾಷ್ಟ್ರೀಯ ಸೇವಾ ಯೋಜನೆಯ ಹಾಗು ಲೆಕ್ ಯೂನಿಯನ್ ಪದಾಧಿಕಾರಿಗಳ ಪದಗ್ರಹಣ ಸಮಾರಂಭದ ದಿವ್ಯಾಸಾನಿಧ್ಯ ವಹಿಸಿ ಮಾತನಾಡಿದ ಅವರು ಇಂದಿನ ದುಬಾರಿ ಜಗತ್ತಿನಲ್ಲಿ ಬಡ,ಮಧ್ಯಮ ವರ್ಗದ ವಿದ್ಯಾರ್ಥಿಗಳ ಶಿಕ್ಷಣಕ್ಕೆ ಎಸ್.ಜೆ.ಎಂ ವಿದ್ಯಾಪೀಠದ ಎಲ್ಲಾ ಶಾಲಾ–ಕಾಲೇಜುಗಳು ಶಿಕ್ಷಣ ಸೇವೆಯನ್ನು ಸಮಾಜಕ್ಕೆ ನೀಡುತ್ತಲೇ



ಸಮಾಜದಲ್ಲಿ ನ್ಯಾಯ ಅನ್ಯಾಯಗಳ ಒಳಿತು ಕೆಡುಕುಗಳ ಕುರಿತ ಅರಿವನ್ನು ಕಾನೂನು ಮಹಾವಿದ್ಯಾಲಯದ ಮೂಲಕ ನೀಡುತ್ತಿದೆ ಎಂದರು. ಹಾಗೆಯೇ ಕಾನೂನು ವಿದ್ಯಾರ್ಥಿಗಳ ಮುಖ್ಯ ಹೊಣೆಗಾರಿಕೆ ಸಮಾಜದಲ್ಲಿ ಸಾಮರಸ್ಯ ಕಾಪಾಡುವುದು ಎಂದು ತಿಳಿಸಿದರುಶಿಕ್ಷಣತಜ್ಞರು, ಹಾಗೂ ಬಾಪೂಜಿ ಸಮೂಹ ಶಿಕ್ಷಣ ಸಂಸ್ಥೆಗಳ ಸಂಸ್ಥಾಪಕ ಕಾರ್ಯದರ್ಶಿಗಳಾದ ಡಾ. ಕೆ.ಎಂ .ವೀರೇಶ್ ಮಾತನಾಡಿ ಕರ್ನಾಟಕದ ಶೈಕ್ಷಣಿಕ ಪರಂಪರೆಯಲ್ಲಿ ಎಸ್. ಜೆ.ಎಂ ವಿದ್ಯಾಪೀಠಕ್ಕೆ ತನ್ನದೇ ಆದ ಅನನ್ಯತೆ ಇದೆ.ಈ ಸಂಸ್ಥೆಯಲ್ಲಿ ಶಿಕ್ಷಣ ಪಡೆದವರು ಅಚ್ಚಳಿಯದೆ ನಾಡಿನ ಜನ ಮಾನಸದಲ್ಲಿ ಗಟ್ಟಿಯಾಗಿ ಉಳಿಯುತ್ತಾರೆ.ಕಾನೂನನ್ನು ಸರಿಯಾಗಿ ಪಾಲಿಸಿದಲ್ಲಿ ಮಾತ್ರ ಪದವಿ ಪಡೆದದ್ದಕ್ಕೆ ಸಾರ್ಥಕತೆ ಬರುತ್ತದೆ ಎಂದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿ ಪ್ರಸ್ತಾವಿಕ ನುಡಿಗಳನ್ನಾಡಿದ ಕಾಲೇಜಿನ ಪ್ರಾಚಾರ್ಯರಾದ ಡಾ.ಎಸ್ ದಿನೇಶ್ ಕಾಲೇಜಿನ ವಾರ್ಷಿಕ ಕಾರ್ಯಕ್ರಮಗಳ ಪಕ್ಷಿ ನೋಟವನ್ನುತಿಳಿಸಿ ಕಾನೂನು ವಿದ್ಯಾರ್ಥಿಗಳು ಸಮಾಜದ ಅನ್ಯಾಯಗಳ ವಿರುದ್ಧ ಹೋರಾಡಲು ಕಾನೂನನ್ನು ಶ್ರದ್ಧೆಯಿಂದ ಅಭ್ಯಾಸಿಸಿ ಅನ್ವಯಿಸಬೇಕು ಸಮಾನತೆಗಾಗಿ ಶ್ರಮಿಸಬೇಕು ಎಂದರು.

ರಾಷ್ಟ್ರೀಯ ಸೇವಾ ಯೋಜನೆಯ ಸಮನ್ವಯಾಧಿಕಾರಿಕೆ.ವಿ.ಲೋಕೇಶ ರೆಡ್ಡಿ 2023–24ನೆಯ ಸಾಲಿನ ವಾರ್ಷಿಕ ಕಾರ್ಯಕ್ರಮದ ವಿವರಣೆಯನ್ನು ವಿಡಿಯೋ ತುಣುಕುಗಳ ಮೂಲಕ ತಿಳಿಸಿದರು.

ಕಾಲೇಜಿನ ಹಿರಿಯ ಸಹಪ್ರಾಧ್ಯಾಪಕರಾದ ಕೆ. ಎನ್. ವಿಶ್ವನಾಥ್ ಮಾತನಾಡಿ ವಕೀಲ ವೃತ್ತಿಗೆ ನಿವೃತ್ತಿ ಇಲ್ಲ. ಸಾಯುವರೆಗೂ ಇದು ನಿಮ್ಮ ಜೀವನ ನಿರ್ವಹಣೆಗೆ ಅವಕಾಶ ಮಾಡಿಕೊಡುತ್ತದೆ.ಆದರೆ ಶ್ರಮ ಅಗತ್ಯ ಎಂದರು. ಕಾರ್ಯಕ್ರಮದಲ್ಲಿ ಶಿಲ್ಪಶ್ರೀ ಸ್ವಾಗತಿಸಿ,ದರ್ಶನ್ ಹಾಗೂ ಅನುಶ್ರೀ ನಿರೂಪಿಸಿ, ಹಿಮಗಿರಿ. ಎಚ್‌ವಂದಿಸಿದರು. ಕಾಲೇಜಿನ ಸಹ ಪ್ರಾಧ್ಯಾಪಕರುಗಳಾದ ಶ್ರೀಮತಿ ಸುಮನ. ಎಸ್. ಅಂಗಡಿ,ಲೊಕೇಶ್ ರೆಡ್ಡಿ .ಹಾಗೂ ಸಹಾಯಕ ಪ್ರಾಧ್ಯಾಪಕರುಗಳಾದ ಶೈಲಜಾ ಟಿ,ಗಿರೀಶ್ ಟಿ.ಎಸ್.,ಶ್ವೇತ ,ಬಿ.ವೈ .ಸ್ಮಿತಾ, ಅಂಬಿಕಾ,ಸಲ್ಮಾ ಸುಲ್ತಾನ್, ಹಾಗೂ ಗುರುಪ್ರಸಾದ್‌ಗ್ರಂಥಾಲಯ ಮತ್ತು ಮಾಹಿತಿ ವಿಜ್ಞಾನ ವಿಭಾಗದ ಸಂದೀಪ್ ಕುಮಾರ್, ಬೋಧಕೇತರ ಸಿಬ್ಬಂದಿಗಳಾದ ಶ್ರೀಮತಿ ವಿಜಯಮ್ಮ, ವಿಜಯ್ ಹಾಗೂ ಅಶೋಕ್ ಪಾಲ್ಗೊಂಡು ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು.

ಫಾಸ್ಟ್ ನ್ಯೂಸ್

## ಕಳಪೆ ಗುಣಮಟ್ಟದ ಟಾರ್ಪಲ್: ಬಡ್ಡಿ ಸಮೇತ ಪರಿಹಾರ ನೀಡಲು ಆದೇಶ

» ದಾವಣಗೆರೆ

ದಾವಣಗೆರೆ ತಾಲ್ಲೂಕಿನ ಆಲೂರು ಗ್ರಾಮದ ರೈತ ನಟರಾಜ್ ಬಿನ್ ಜಯಪ್ಪ ಇವರು ಮುಂಬೈ ಮೂಲದ ಸಂಸ್ಥೆಯ ತಯಾರಿಕಾ ಟಾರ್ಪಲ್‌ನ್ನು ದಾವಣಗೆರೆ ಮಾರಾಟಗಾರರಿಂದ 2023 ರ ಮೇ 26 ರಂದು ರೂ. 1,00,027 ಮೌಲ್ಯದ ಟಾರ್ಪಲ್ ಖರೀದಿಸಿದರು. ರೈತರಾದ ನಟರಾಜ್ ತಮ್ಮ ಜಮೀನಿನಲ್ಲಿ ನಿರ್ಮಿಸಿದ ಕೃಷಿ ಹೊಂಡದಲ್ಲಿ ನೀರನ್ನು ಸಂಗ್ರಹಿಸಲು ಟಾರ್ಪಲ್ ಖರೀದಿಸಿದ್ದು ತದನಂತರ ಕೃಷಿ ಹೊಂಡದಲ್ಲಿ ಸಂಗ್ರಹಿಸಿದ ನೀರು ಟಾರ್ಪಲಿನ ಕಳಪೆ ಗುಣ ಮಟ್ಟದಿಂದ ಸೋರಿ ಹೋಗುತ್ತಿರುವುದರಿಂದ ನವಂಬರ್ 12 ರಂದು ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದಲ್ಲಿ ಮುಂಬೈ ಮೂಲದ ಹಿಪೋ ಟೆಕ್ ಟೆಕ್ಸ್‌ಕೋ ಹೌಸ್ ಮೂಲದ ತಯಾರಿಕಾ ಸಂಸ್ಥೆ ವಿರುದ್ದ ರೂ.20,000 ಮಾನಸಿಕ ಕಿರುಕುಳ ಹಾಗೂ ದೂರು ದಾಖಲಿಸಲು ಖರ್ಚು ಮಾಡಿದ ಮೊತ್ತ ರೂ.5,000 ಗಳನ್ನು ಪಾವತಿಸುವಂತೆ ದೂರನ್ನು ದಾಖಲಿಸಿದರು. ರೈತರಿಗೆ ಹಣಕಾಸಿನ ಮತ್ತು ಮಾನಸಿಕ ತೊಂದರೆಯನ್ನು ಉಂಟು ಮಾಡಿದ್ದರಿಂದ ಸ್ಥಾನಿಕ ಮಾರಾಟಗಾರರು ಮತ್ತು ತಯಾರಕರು ಜಂಟಿಯಾಗಿ. ಟಾರ್ಪಲ್ ಮೊತ್ತ ರೂ.1,00,027/-ಗಳಿಗೆ ಶೇ 18%ರ ಬಡ್ಡಿಯೊಂದಿಗೆ ಖರೀದಿಸಿದ ದಿನಾಂಕದಿಂದ 3 ತಿಂಗಳ ಒಳಗಾಗಿ ಪಾವತಿಸಲು ದಾವಣಗೆರೆ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಅಧ್ಯಕ್ಷರಾದ ಮಹಂತೇಶ ಈರಪ್ಪ ಶಿಗ್ಲಿ, ಸದಸ್ಯರಾದ ತ್ಯಾಗರಾಜನ್ ಮತ್ತು ಮಹಿಳಾ ಸದಸ್ಯರಾದ ಶ್ರೀಮತಿ ಬಿ.ಯು. ಗೀತಾ ಸಂಸ್ಥೆಗೆ ಆದೇಶಿಸಿದೆ.

## ನಿರಂತರ ಕುಡಿಯುವ ನೀರು ಪೂರೈಕೆಯಲ್ಲಿ ವ್ಯತ್ಯಯ

» ದಾವಣಗೆರೆ

ಕವಲೆತ್ತು ಗ್ರಾಮದ ಹತ್ತಿರವಿರುವ ಜಾಕ್‌ವೆಲ್‌ನಲ್ಲಿ ಹೊಸದಾಗಿ ವಿದ್ಯುತ್ ಟ್ರಾನ್ಸ್‌ಫಾರಂಗೆ ಕೇಬಲ್ ಅಳವಡಿಸುವ ಕಾಮಗಾರಿ ಪ್ರಯುಕ್ತ ನ.20 ರಂದು ಬೆಳಿಗ್ಗೆ 10 ರಿಂದ ಸಂಜೆ 5 ಗಂಟೆಯವರೆಗೆ ವಿದ್ಯುತ್ ಸರಬರಾಜುವಿನಲ್ಲಿ ವ್ಯತ್ಯಯವಾಗುತ್ತಿರುವುದರಿಂದ ನಿರಂತರ ಕುಡಿಯುವ ನೀರು ಪೂರೈಕೆ ಇರುವುದಿಲ್ಲ ಎಂದು ಹರಿಹರ ನಗರಸಭೆ ಪೌರಾಯುಕ್ತರು ತಿಳಿಸಿದ್ದಾರೆ.

## ವೃಂದವನಹಳ್ಳಿ : ಕಾರ್ತಿಕಮಾಸದ ಹಿನ್ನೆಲೆಯಲ್ಲಿ ಎತ್ತುಗಳ ವಿಶೇಷಪೂಜೆ, ಮೆರವಣಿಗೆ.



» ಚಳ್ಳಕೆರೆ

ಪ್ರತಿವರ್ಷದ ಕಾರ್ತಿಕಮಾಸದಲ್ಲಿ ಗ್ರಾಮೀಣ ಭಾಗಗಳಲ್ಲಿದೀಪಾವಳಿಹಬ್ಬದಹಿನ್ನೆಲೆಯಲ್ಲಿಎತ್ತುಗಳ ಹಬ್ಬವನ್ನು ಸಹ ಸಂಭ್ರಮದಿಂದ ಆಚರಿಸುತ್ತಾರೆ. ಇಡೀ ವರ್ಷ ವ್ಯವಸಾಯ ಚಟುವಟಿಕೆಗಳಿಗೆ ಆಸರೆಯಾಗಿರುವ ಎತ್ತುಗಳಿಗೆ ಅಂದು ವಿಶೇಷ ದಿನವಾಗಿದೆ. ಕಾರಣ, ಎತ್ತುಗಳನ್ನು ತೊಳೆದು, ಬಣ್ಣ, ಬಣ್ಣ, ಹೂ, ಬಲೂನ್, ಟೇಪ್‌ಗಳಿಂದ ಸಿಂಗರಿಸಿ ಗ್ರಾಮದಲ್ಲಿ ಮೆರವಣಿಗೆ ನಡೆಸಿ ಸಂತಸ ಪಡುತ್ತಾರೆ. ತಾಲ್ಲೂಕಿನ ಪಗಡಲಬಂಡೆ ಗ್ರಾಮ ಪಂಚಾಯಿತಿ ವ್ಯಾಪ್ತಿಯ ವೃಂದವನಹಳ್ಳಿ ಗ್ರಾಮದಲ್ಲಿ ಪ್ರತಿವರ್ಷದಂತೆ ಈ ವರ್ಷವೂ ಎತ್ತುಗಳ ಹಬ್ಬ ಆಯೋಜಿಸಿದ್ದರು. ಗ್ರಾಮದ ಪದ್ಧತಿಯಂತೆ ಗ್ರಾಮದ ಹೊರವಲಯದಲ್ಲಿ ಕಿಚ್ಚು(ಈಡು) ಹಾಯಿಸುವ ಕಾರ್ಯಕ್ರಮವಿರುತ್ತದೆ. ಕಟ್ಟಿಗೆ ಹಾಗೂ ಇತರೆ ರಾಶಿಯನ್ನು ಹಾಕಿ ಅದಕ್ಕೆ ಬೆಂಕಿ ಹಚ್ಚಿ ಅಲಂಕೃತಗೊಂಡ ಎತ್ತುಗಳನ್ನು ಅದರ ಸುತ್ತಲು ಪ್ರದಕ್ಷಣೆ ಮಾಡಿಸುತ್ತಾರೆ. ಇದರಿಂದ ಎತ್ತುಗಳಿಗೆ ಯಾವುದೇ ರೋಗರುಜಿನೆ ಬರುವುದಿಲ್ಲವೆಂಬುವುದು ನಂಬಿಕೆಯಾಗಿದೆ. ಇನ್ನೂ ಕೆಲವರು ಎತ್ತುಗಳನ್ನು ಬೆಂಕಿಯ ಮೇಲೆ ಹಾಯಿಸವ ಪ್ರಯತ್ನವನ್ನು ಮಾಡುತ್ತಾರೆ. ಗ್ರಾಮದ ಹಿರಿಯರಾದ ಜಿ.ಎಸ್.ಹನುಮಂತರಾಯ, ಕರಿಯಪ್ಪತಿಪ್ಪೇಸ್ವಾಮಿ ಮಾತನಾಡಿ, ಈ ಹಿಂದೆ ಪ್ರತಿಗ್ರಾಮದಲ್ಲೂ ನೂರಾರು ಜೊತೆ ಎತ್ತುಗಳನ್ನು ಅಲಂಕರಿಸಿ ಮೆರವಣಿಗೆ ಮಾಡಲಾಗುತ್ತು. ಆದರೆ, ಈಗ ಗ್ರಾಮದಲ್ಲಿ ಎತ್ತುಗಳ ಸಂಖ್ಯೆ ವರ್ಷದಿಂದ ವರ್ಷಕ್ಕೆ ಕ್ಷೀಣಿಸುತ್ತಿದೆ. ನಮ್ಮ ಗ್ರಾಮದಲ್ಲಿ ಕೇವಲ ಬೆರಳಣಿಕೆ ಎತ್ತುಗಳು ಮಾತ್ರ ಇವೆ. ಆದರೂ ಸಹ ನಾವು ಸಂಪ್ರದಾಯವನ್ನು ಬಿಡದೆ ಈ ಕಾರ್ಯವನ್ನು ನಡೆಸುತ್ತಾ ಬಂದಿದ್ದೇವೆ, ಅಂದು ಗ್ರಾಮದಲ್ಲಿ ಹಬ್ಬದ ವಾತಾವಣ ಸೃಷ್ಠಿಯಾಗಿರುತ್ತದೆ. ಆದರೆ, ಇಂದು ಹೆಚ್ಚು ಸಂಭ್ರಮವಿಲ್ಲದಿದ್ದರೂ ಆಚರಣೆ ಮಾತ್ರ ಮುಂದುವರೆದಿದೆ ಎಂದಿದ್ದಾರೆ. ಜಿ.ಕೆ.ರಾಘವೇಂದ್ರ, ಶಿವಣ್ಣ, ನಾಗರಾಜು, ಮಹಂತೇಶ್, ಕಲ್ಲೇಶ್‌ಪ್ಪ, ನರೇಂದ್ರ, ಸುನೀಲ್, ಮಂಜುನಾಥ ಮುಂತಾದವರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

### ರಜಾ ದಿನಗಳಂದು ವಿಶೇಷ ಕಾರ್ಯಾಚರಣೆ; ಡಾ; ಶಮ್ಲಾ ಇಕ್ಬಾಲ್

# ಮತದಾರರ ಪಟ್ಟಿ ವಿಶೇಷ ಪರಿಷ್ಕರಣೆ, ನ.28 ರವರೆಗೆ ಆಕ್ಷೇಪಣೆ, ವರ್ಗಾವಣೆಗೆ ಅವಕಾಶ

» ದಾವಣಗೆರೆ



ಭಾರತ ಚುನಾವಣಾ ಆಯೋಗ ನಿರ್ದೇಶನದನ್ವಯ ಮತದಾರ ಪಟ್ಟಿಯ ಸಂಕ್ಷಿಪ್ತ ವಿಶೇಷ ಪರಿಷ್ಕರಣೆ ನಡೆಯುತ್ತಿದ್ದು ಮತದಾರರ ಪಟ್ಟಿಗೆ ಹೊಸದಾಗಿ ಸೇರ್ಪಡೆ, ತಿದ್ದುಪಡಿ, ವರ್ಗಾವಣೆ ಹಾಗೂ ಆಕ್ಷೇಪಣೆಗಳಿದ್ದಲ್ಲಿ ನವಂಬರ್ 28 ರೊಳಗಾಗಿ ಸಲ್ಲಿಸಲು ಅವಕಾಶ ಇದೆ ಎಂದು ತೋಟಗಾರಿಕೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ದಿ, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ, ರೇಷ್ಮೆ ಇಲಾಖೆ ಸರ್ಕಾರದ ಕಾರ್ಯದರ್ಶಿ ಹಾಗೂ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಮತ್ತು ಮತದಾರರ ಪಟ್ಟಿ ವಿಶೇಷ ವೀಕ್ಷಕರಾದ ಡಾ; ಶಮ್ಲಾ ಇಕ್ಬಾಲ್ ತಿಳಿಸಿದರು.

ಅವರು ಶನಿವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ವಿವಿಧ ರಾಜಕೀಯ ಪಕ್ಷಗಳ ಮುಖಂಡರೊಂದಿಗೆ ಮತದಾರರ ಪಟ್ಟಿಯ ವಿಶೇಷ ಪರಿಷ್ಕರಣೆ ಕುರಿತಂತೆ ಮಾಹಿತಿ ನೀಡುವ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಈಗಾಗಲೇ ಅಕ್ಟೋಬರ್ 29 ರಂದು ಕರಡು ಮತದಾರರ ಪಟ್ಟಿ ಬಿಡುಗಡೆ ಮಾಡಲಾಗಿದ್ದು ನವೆಂಬರ್ 28 ರ ವರೆಗೆ ಆಕ್ಷೇಪಣೆಗಳನ್ನು ಸಲ್ಲಿಸಲು ಅವಕಾಶ ನೀಡಲಾಗಿದೆ. ಈ ಅವಧಿಯಲ್ಲಿ ನವೆಂಬರ್ 23 ನಾಲ್ಕನೇ ಶನಿವಾರ ಹಾಗೂ 24 ರ ಭಾನುವಾರ ರಜಾ ದಿನಗಳಂದು ವಿಶೇಷ ಕಾರ್ಯಾಚರಣೆ ಮಾಡಲಾಗುತ್ತದೆ. ಸಾರ್ವಜನಿಕರು ತಮ್ಮ ಮತಗಟ್ಟೆ ವ್ಯಾಪ್ತಿಯ ಮತಗಟ್ಟೆ ಅಧಿಕಾರಿಗಳನ್ನು ಭೇಟಿ ಮಾಡಿ ಆಕ್ಷೇಪಣೆಗಳಿದ್ದಲ್ಲಿ ಸಲ್ಲಿಸಬಹುದಾಗಿದೆ ಎಂದರು. ಸಾರ್ವಜನಿಕರು ಮತದಾರರ ಪಟ್ಟಿಗೆ ಆಕ್ಷೇಪಣೆಗಳನ್ನು ತಹಶೀಲ್ದಾರರ ಕಚೇರಿ, ಉಪವಿಭಾಗಾಧಿಕಾರಿಗಳ ಕಚೇರಿ, ಪಾಲಿಕೆ ವ್ಯಾಪ್ತಿಯಲ್ಲಿ ಸಂಬಂಧಿಸಿದ ಕಾರ್ಯಾಲಯಗಳಿಗೆ ಹಾಗೂ ಬಿ.ಎಲ್.ಓ.ಗಳಿಗೆ ನೀಡಬಹುದಾಗಿದೆ. ಸ್ವೀಕರಿಸುವ ಎಲ್ಲಾ ಅರ್ಜಿಗಳನ್ನು ಡಿಸೆಂಬರ್ 24 ರೊಳಗಾಗಿ ಇತ್ಯರ್ಥಪಡಿಸಿ 2025 ರ ಜನವರಿ 6 ರಂದು ಅಂತಿಮ ಮತದಾರರ ಪಟ್ಟಿಯನ್ನು ಪ್ರಕಟಿಸಲಾಗುತ್ತದೆ ಎಂದರು.

ಜಿಲ್ಲಾಧಿಕಾರಿ ಜಿ.ಎಂ. ಗಂಗಾಧರಸ್ವಾಮಿಯವರು ಮಾತನಾಡಿ ಜಿಲ್ಲೆಯ 7 ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ 1693 ಮತಗಟ್ಟೆಗಳಿದ್ದು ಎಲ್ಲಾ ಮತಗಟ್ಟೆಗಳಲ್ಲಿ ಮತಗಟ್ಟೆ ಅಧಿಕಾರಿಗಳನ್ನು ನೇಮಕ ಮಾಡಲಾಗಿದೆ. ಇದರಲ್ಲಿ 1048 ಶಿಕ್ಷಕರು, 501 ಅಂಗನವಾಡಿ ಕಾರ್ಯಕರ್ತೆಯರು, 61 ಆಶಾ ಕಾರ್ಯಕರ್ತೆಯರು, 38 ಬಿಲ್ ಕಲೆಕ್ಟರ್, 15 ಗ್ರಾಮ ಆಡಳಿತಾಧಿಕಾರಿಗಳು, 16 ದ್ವಿತೀಯ ದರ್ಜೆ ಸಹಾಯಕರು, 14 ಪ್ರಥಮ ದರ್ಜೆ ಸಹಾಯಕರು ಬಿಎಲ್‌ಓಗಳಾಗಿ ಕಾರ್ಯನಿರ್ವಹಿಸುತ್ತಿದ್ದಾರೆ ಎಂದರು.

ಕರಡು ಮತದಾರರ ಪಟ್ಟಿಯನ್ವಯ 2025 ರ ಜನವರಿಗೆ 1 ಕ್ಕೆ ನಿರೀಕ್ಷಿತ 19,143,379 ಜನಸಂಖ್ಯೆ ನಿರೀಕ್ಷಿಸಲಾಗಿದೆ. ಪ್ರಸ್ತುತ 743476 ಪುರುಷ, 751277 ಮಹಿಳೆ ಸೇರಿ 1494753 ಮತದಾರರಿದ್ದಾರೆ. ಇದು ಜನಗಣತಿ ಅಂಕಿ ಅಂಶಕ್ಕೆ ಹೋಲಿಕೆ ಮಾಡಿದಲ್ಲಿ ಶೇ 78.08 ಮತದಾರರಿದ್ದಾರೆ.

ವಯೋಮಾನದ್ವಯ 18 ರಿಂದ 19 ವರ್ಷ 43805 ಮತದಾರರಿದ್ದು ಜನಸಂಖ್ಯೆಗೆ ಶೇ 2.28%, 20-29 ವರ್ಷದವರೆಗೆ 298110 ಮತದಾರರು ಜನಸಂಖ್ಯೆಗೆ ಶೇ 15.57%, 30-39 ರವರೆಗೆ 340012 ಮತದಾರರು ಜನಸಂಖ್ಯೆಗೆ ಶೇ 17.76, 40-49 ರ ಮಧ್ಯದಲ್ಲಿ 325916 ಮತದಾರರು ಜನಸಂಖ್ಯೆಗೆ ಶೇ 17.02, 50-59 ರಲ್ಲಿ 238269 ಮತದಾರರು ಜನಸಂಖ್ಯೆಗೆ ಶೇ 12.44, 60-69 ರ ವಯಸ್ಸಿನವರು 148982 ಮತದಾರರು ಜನಸಂಖ್ಯೆಗೆ ಶೇ 7.78, 70-79 ರ ವಯೋಮಾನ 72742 ಮತದಾರರು ಜನಸಂಖ್ಯೆಗೆ ಶೇ 3.79 ಮತ್ತು 80-89 ವರ್ಷದ ಅವಧಿಯಲ್ಲಿ 22976 ಮತದಾರರಿದ್ದಾರೆ, ಜನಸಂಖ್ಯೆಗೆ ಹೋಲಿಕೆ ಮಾಡಿದಲ್ಲಿ ಶೇ 1.20 ಮತದಾರರಿದ್ದಾರೆ. ಈ ಅವಧಿಯಲ್ಲಿ ಹೊಸದಾಗಿ ಯುವ ಮತದಾರರಾಗಿ 43805 ಮತದಾರರು ಸೇರ್ಪಡೆಯಾಗಿದ್ದಾರೆ.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸುರೇಶ್ ಬಿ.ಇಟ್ನಾಳ್, ಅಪರ ಜಿಲ್ಲಾಧಿಕಾರಿ ಪಿ.ಎನ್.ಲೋಕೇಶ್ ಹಾಗೂ ವಿವಿಧ ರಾಜಕೀಯ ಪಕ್ಷಗಳ ಮುಖಂಡರು ಉಪಸ್ಥಿತರಿದ್ದರು.

# ವಿದ್ಯಾರ್ಥಿಗಳಲ್ಲಿ ಭಾಷಾ ಪ್ರೇಮ ಮೂಡಿಸುವುದು ಆದ್ಯ ಕರ್ತವ್ಯ: ಡಾ. ಬಸವಕುಮಾರ ಸ್ವಾಮೀಜಿ

» ಚಿತ್ರದುರ್ಗ

ಕರ್ನಾಟಕ,ಕನ್ನಡ ಎಂದರೆ ಒಂದು ಸುಂದರ ಅನುಭವ, ನಮ್ಮ ನಾಡು ನುಡಿ ಹಲವಾರು ವ್ಯಾಯಾಮಗಳಲ್ಲಿ ಸಂಪದ್ಭರಿತವಾಗಿದ್ದು,ಚಿತ್ರದುರ್ಗದ ನರ್ಸಿಂಗ್ ಕಾಲೇಜಿನಲ್ಲಿ ರಾಜ್ಯದ ಜತೆ ಹಲವಾರು ವಿದ್ಯಾರ್ಥಿಗಳು ಹೊರ ರಾಜ್ಯಗಳಿಂದ ಅಭ್ಯಾಸ ಮಾಡಲು ಬಂದಿದ್ದು ಕನ್ನಡ ಕಲಿಯುವದರ ಮೂಲಕ ಕನ್ನಡದ ಬಗ್ಗೆ ಒಲವು ಮೂಡಿಸಿಕೊಳ್ಳಬೇಕು. ಆ ರೀತಿಯಲ್ಲಿ ಎಲ್ಲರೂ ಸೇರಿ ಕನ್ನಡ ರಾಜ್ಯೋತ್ಸವ ಆಚರಿಸುವ ಕ್ರಮ ಸಂತಸದ ವಿಷಯ ಎಂದು ಚಿತ್ರದುರ್ಗದ ಶ್ರೀ ಜಗದ್ಗುರು ಮುರುಘರಾಜೇಂದ್ರ ಬೃಹನ್ಮಠ ಹಾಗೂ ಎಸ್ ಜೆ ಎಂ ವಿದ್ಯಾಪೀಠದ ಆಡಳಿತ ಮಂಡಳಿಯ ಸದಸ್ಯರಾದ ಡಾ. ಬಸವಕುಮಾರ ಸ್ವಾಮಿಗಳು ಸಲಹೆ ನೀಡಿದರು.



ಶ್ರೀಗಳವರು ನಗರದ ಎಸ್.ಜೆ.ಎಂ. ಇನ್‌ಸ್ಟಿಟ್ಯೂಟ್ ಆಫ್ ನರ್ಸಿಂಗ್ ಸೈನ್ಸಸ್ ಕಾಲೇಜಿನ ವತಿಯಿಂದ ಬಿಚ್ಚುಗತ್ತಿ ಭರಮಣ್ಣ ನಾಯಕ ಸಭಾಂಗಣದಲ್ಲಿ ನಡೆದ 69ನೇ ಕನ್ನಡ ರಾಜ್ಯೋತ್ಸವ ಸಮಾರಂಭದ ದಿವ್ಯ ಸಾನಿಧ್ಯ ವಹಿಸಿ ಮಾತನಾಡಿದ ಅವರು ಕರ್ನಾಟಕವು ಎಲ್ಲ ಆಯಾಮಗಳಲ್ಲಿಯೂ ಒಂದು ಸುಂದರ ರಾಜ್ಯವಾಗಿದ್ದು, ವಿಭಿನ್ನ ಭಾಷೆ, ಧರ್ಮ,ಜಾತಿ ವ್ಯವಸ್ಥೆಯನ್ನ ಒಳಗೊಂಡಿದೆ, ಹಾಗೆಯೇ ನಮ್ಮ ವಿದ್ಯಾಪೀಠದ ಅಡಿಯಲ್ಲಿ ಹಲವಾರು ವಿದ್ಯಾಸಂಸ್ಥೆಗಳುಕಾರ್ಯನಿರ್ವಹಿಸುತ್ತಿದ್ದುವಿಭಿನ್ನ ರಾಜ್ಯಗಳ ವಿದ್ಯಾರ್ಥಿಗಳು ಅಭ್ಯಸಿಸುತ್ತಿದ್ದಾರೆ. ಕನ್ನಡ ನಾಡಗೀತೆಯಲ್ಲಿರುವ ಪ್ರತೀ ಸಾಲಿನ ಪದಗಳು ಸಹ ಕನ್ನಡದ ಮಹತ್ವವನ್ನು ಸಾರಿ,ಸಾರಿ ಹೇಳುತ್ತವೆ. ಕನ್ನಡಿಗರಾಗಿರುವ ನಾವೇ ಧನ್ಯರು. ಕನ್ನಡ ಉಳಿಸಿ,ಬೆಳೆಸುವ ಜತೆಗೆ ಕನ್ನಡ ಬಳಸುವುದು ಅತೀ ಅವಶ್ಯಕ ಎಂದು ತಿಳಿಸಿದರು.

ಜಾನಪದ ಲಾವಣಿಕಾರರಾದ ಗಂಜಿಗಟ್ಟೆ ಕೃಷ್ಣಮೂರ್ತಿಯವರು ಕರ್ನಾಟಕದ ವಿಶಿಷ್ಟ ಆಚರಣೆಗಳು,ಧರ್ಮ, ಇತಿಹಾಸ, ಮಹಾನೀಯರು ನೀಡಿದ ಸಂದೇಶಗಳು, ಕಾಣಿಕೆಗಳನ್ನು ತಮ್ಮ ಲಾವಣಿ ಹಾಡುಗಳ ಮೂಲಕ ನೆರೆದಿದ್ದ ವಿದ್ಯಾರ್ಥಿಗಳಿಗೆ ಅರ್ಥೈಸಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿ ಪ್ರಾಸ್ತಾವಿಕ ನುಡಿಗಳನ್ನಾಡಿದ ಕಾಲೇಜಿನ ಪ್ರಾಂಶುಪಾಲರಾದ ಡಾ. ಎಸ್. ವಿ. ಸವಿತಾ ಕನ್ನಡ ಭಾಷೆಯ ಬಗ್ಗೆ ಕೀಳರಿಮೆ ತೋರದೆ ಪ್ರತಿಯೊಬ್ಬರೂ ಕನ್ನಡ ಮಾತನಾಡುವುದರ ಮೂಲಕ ಭಾಷೆಯ ಮೇಲಿರುವ ತಮ್ಮ ಅಭಿಮಾನವನ್ನು ಮೆರೆಯಬೇಕು ಮತ್ತು ಅಭಿಮಾನ ಬೇರೆಯವರಿಗೆ ಮೂಡಿಸುವಂತಹ ಕೆಲಸ ಮಾಡಬೇಕೆಂದರು.

## ಇಂದು ಅನಾವಣರಗೊಳ್ಳಲಿರುವ "ಸಿರಿದಾನ್ಯಗಳ ನಾಡು" ನಾಮಫಲಕ




» ಹೊಸದುರ್ಗ

ಚಿತ್ರದುರ್ಗ ಜಿಲ್ಲೆಯ ಹೊಸದುರ್ಗ ಒಂದು ತಾಲೂಕು ಕೇಂದ್ರ, ಈ ತಾಲೂಕಿನ ಪ್ರಮುಖ ಪುಣ್ಯ ಕ್ಷೇತ್ರಗಳಾದ ಶ್ರೀ ಹಾಲುರಾಮೇಶ್ವರ ಹಾಗೂ ಶ್ರೀ ಗವಿರಂಗನಾಥ, ಬಾಗೂರಿನ ಚನ್ನಕೇಶವ ಮತ್ತಿತರೆ ದೇವಾಲಯಗಳು ಅತ್ಯಂತ ಪುರಾತನವಾಗಿದ್ದು. ಮೈಸೂರು ಮಹಾರಾಜರ ಆಳ್ವಿಕೆ ಇತಿಹಾಸ ಹೊಂದಿರುವ ತಾಲ್ಲೂಕು ಆಗಿದ್ದು ಹತ್ತಾರು ವರ್ಷಗಳಿಂದ ಈ ಭಾಗದ ರೈತರು ತೆಂಗು, ಸಿರಿದಾನ್ಯಗಳು ಹಾಗೂ ದಾಳಿಂಬೆ ಹಣ್ಣನ್ನು ಬೆಳೆದು ರಾಜ್ಯ ಮಟ್ಟದಲ್ಲಿ ಖ್ಯಾತಿಹೊಂದಿದ ತಾಲ್ಲೂಕಾಗಿದ್ದು ಕಾಲ ಕ್ರಮೇಣ ರೋಗಗಳಿಂದ ತೆಂಗು ಮತ್ತು ದಾಳಿಂಬೆ ಬೆಳೆ ಕಡಿಮೆಯಾಗಿದು ಸಿರಿದಾನ್ಯಗಳಾದ ನವಣೆ, ಸಾವೆ, ಸಜ್ಜೆ, ಹಾಗೂ ಇತರೆ ದಾನ್ಯಗಳನ್ನು ಬೆಳೆಯವುದನ್ನು ಹೆಚ್ಚಿಸುತ್ತಾ ಬಂದಿದ್ದು ರಾಷ್ಟ್ರಮಟ್ಟದಲ್ಲಿ ಪ್ರಖ್ಯಾತಿ ಪಡೆಯಲಾಗಿದ್ದು ಈ ಹಿನ್ನೆಲೆಯಲ್ಲಿ ಸಾರ್ವಜನಿಕ ವಲಯಗಳಲ್ಲಿ ಹೊಸದುರ್ಗ ಪಟ್ಟಣದ ಪುರಸಭೆ ಸ್ವಾಗತ ಕಮಾನುಗಳಿಗೆ ಒಳ್ಳೆಯ ಹೆಸರನ್ನು ಇಡಲು ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿದ್ದು ಹಲವಾರು ಭಾರಿ ಶಾಸಕ ಬಿ.ಜಿ.ಗೋವಿದಂಪ್ಪ ಅವರ ನೇತೃತ್ವದಲ್ಲಿ ಈ ಹಿಂದೆ ನಡೆದ ರೈತ ಮುಖಂಡರುಗಳ ಸಭೆಗಳಲ್ಲಿ ಉತ್ತಮ ಹೆಸರನ್ನು ನಾಮಕರಣ ಮಾಡಲು ಮನವಿ ಮಾಡಿದ್ದರು. ಈ ವಿಚಾರವಾಗಿ ಪುರಸಭೆ ಅಧ್ಯಕ್ಷೆ ಶ್ರೀಮತಿ ರಾಜೇಶ್ವರಿ ಎಸ್ ಆನಂದ್ ನೇತೃತ್ವದಲ್ಲಿ ಪುರಸಭೆ ಮುಖ್ಯಾಧಿಕಾರಿ ತಿಮ್ಮರಾಜು.ಜಿ.ವಿ, ಉಪಾಧ್ಯಕ್ಷೆ ಗೀತಾ ಆಸಂದಿ, ಕೃಷಿ ಇಲಾಖೆಯ ಸಕಾಯಕ ನಿರ್ದೇಶಕರು ಸಿ.ಎಸ್.ಈಶ ಹಾಗೂ ಪುರಸಭಾ ಸದಸ್ಯರು ಚರ್ಚಿಸುವ ಸಂದರ್ಭದಲ್ಲಿ ಈ ಕಾರ್ಯ ಉತ್ತಮವಾಗಿದ್ದು ನಮ್ಮ ಅವಧಿಯಲ್ಲಿ ಆಗುತ್ತಿರುವುದರಿಂದ ಮುಂದಿನ ಪೀಳಿಗೆಗೆ ಉತ್ತಮ ಸಂದೇಶ ನೀಡಿದಂತಾಗುತ್ತದೆ ಎಂದಿದ್ದರು.

ಪ್ರಮುಖ ಸುದ್ದಿ

# ಮುಂದಿನ ಯುಗ ಜ್ಞಾನ ವಿಜ್ಞಾನಗಳ ಯುಗ: ಸ್ವಾಮೀಜಿ

» ಚಿತ್ರದುರ್ಗ

ಮುಂದಿನ ಯುಗ ಜ್ಞಾನ ವಿಜ್ಞಾನಗಳ ಯುಗವಾಗುತ್ತದೆ ಆದ್ದರಿಂದ ಶಿಕ್ಷಣಕ್ಕೆ ಆದ್ಯತೆ ನೀಡಬೇಕು ಎಂದು ಶ್ರೀ ಜಗದ್ಗುರು ಭೋವಿ ಗುರುಪೀಠದ ಇಮ್ಮಡಿ ಸಿದ್ದರಾಮೇಶ್ವರ ಸ್ವಾಮೀಜಿ ಹೇಳಿದರು.



ನಗರದ ಹೊರವಲಯದ ಭೋವಿ ಗುರುಪೀಠದಲ್ಲಿ ಶನಿವಾರ ಆಯೋಜಿಸಿದ್ದ, ರಾಜ್ಯೋತ್ಸವ ಹಾಗೂ ಸುವರ್ಣ ಮಹೋತ್ಸವ ಪ್ರಶಸ್ತಿ ಪಡೆದ ಪ್ರಶಸ್ತಿ ಪುರಸ್ಕೃತರ ಅಭಿನಂದನಾ ಸಮಾರಂಭದ ಸಾನಿಧ್ಯವಹಿಸಿ ಅವರು ಮಾತನಾಡಿ ಸರ್ಕಾರ ನಿಮ್ಮ ಸೇವೆಯನ್ನು ಪರಿಗಣಿಸಿ ರಾಜ್ಯೋತ್ಸವ ಹಾಗೂ ಸುವರ್ಣ ಮಹೋತ್ಸವ ಪ್ರಶಸ್ತಿ ನೀಡಿದೆ. ಇದು ಕರ್ನಾಟಕದ ಎರಡನೇ ಬಹುದೊಡ್ಡ ಪ್ರಶಸ್ತಿಯಾಗಿದೆ. ಇದು ದೊರಕಿರುವುದು ನಿಮ್ಮ ಪುಣ್ಯ ಎಂದರು.

ಪ್ರಶಸ್ತಿಗೆ ಆಯ್ಕೆಯಾದವರು ಯಾರು ಕೂಡ ಅರ್ಜಿ ಹಾಕಿಲ್ಲ, ಇವರ ಸೇವೆಯನ್ನು ಪರಗಣಿಸಿ ಸರ್ಕಾರ ಪ್ರಶಸ್ತಿ ನೀಡಿದೆ ಇದು ಸಂತೋಷಕರ ವಿಚಾರ ಎಂದರು. ಶಿಕ್ಷಣದಲ್ಲಿ ಸಂಸ್ಕಾರ ಸಿಕ್ಕರೆ ದೊಡ್ಡ ವ್ಯಕ್ತಿಗಳನ್ನಾಗಿ ಮಾಡಿ ಉನ್ನತ ಸ್ಥಾನಗಳಿಗೆ ಕೊಂಡೊಯ್ಯುತ್ತದೆ.ನಮ್ಮಧರ್ಮದಲ್ಲಿರುವ ಕಂದಾಚಾರ, ಮೂಡನಂಬಿಕೆ ಹೊರ ಇಟ್ಟು ನಾವುಗಳು ವೈಜ್ಞಾನಿಕ ವೈಚಾರಿಕತೆಯನ್ನು ಹಾಗೂ ನಮ್ಮ ಆಚರಣೆ, ಧರ್ಮಗಳಲ್ಲಿ ವಿಜ್ಞಾನವನ್ನು ಅಳವಡಿಸಿಕೊಳ್ಳಬೇಕು, ಆಗ ಮಾತ್ರ ಭವಿಷ್ಯ ಸುಗಮವಾಗಿರುತ್ತದೆ. ಆಗ ಸಮ ಸಮಾಜ ನಿರ್ಮಾಣ ಮಾಡಲು ಸಾಧ್ಯವಾಗುತ್ತದೆ. ನಿಜವಾದ ಭಕ್ತಿ ಬಡವರ ಮನೆಯಲ್ಲಿ ಇದೆ. ಬಡವರ ಮನಸ್ಸು ಮುಗ್ದತೆಯಿಂದ ಕೂಡಿರುತ್ತದೆ ಎಂದು ಹೇಳಿ ಇಂತಹ ವ್ಯಕ್ತಿಗಳಿಗೆ ಪ್ರಶಸ್ತಿ ನೀಡಿರುವುದರಿಂದ ಪ್ರಶಸ್ತಿಯ ಮೌಲ್ಯ ಹೆಚ್ಚಾಗುತ್ತದೆ. ಈ ಪ್ರಶಸ್ತಿ ಅರ್ಹರಿಗೆ ಸಿಕ್ಕಿರುವುದರಿಂದ ಮುಂದಿನ ಪೀಳಿಗೆಗೆ ಯುವಕರಿಗೆ ಸ್ಪೂರ್ತಿ ತರಲಿದೆ ಎಂದು ಹೇಳಿದರು. ಶಾಸಕ ಡಾ.ಎಂ. ಚಂದ್ರಪ್ಪ ಮಾತನಾಡಿ ಇಂತಹ ವ್ಯಕ್ತಿಗಳನ್ನು ಗುರುತಿಸಿ ರಾಜ್ಯೋತ್ಸವ ಪ್ರಶಸ್ತಿ ನೀಡಿರುವುದು ಸಂತೋಷಕರ ವಿಚಾರ ಸರ್ಕಾರಕ್ಕೆ ಅಭಿನಂದನೆಗಳನ್ನು ಸಲ್ಲಿಸುತ್ತೇನೆ. ನಾವು ಪ್ರಶಸ್ತಿಪಡೆದವರಿಗೆ ಪ್ರೋತ್ಸಾಹ ನೀಡಬೇಕು, ಮನುಷ್ಯ ಹುಟ್ಟಿನಿಂದ ಸಾರ್ಥಕತೆಯ ಜೀವನ ಕಟ್ಟಿಕೊಂಡು ಸಮಾಜದ ಋಣ ತೀರಿಸಬೇಕು ಎಂದು ಹೇಳಿದರು.

ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಹುಲಿಕಲ್ ನಟರಾಜ್ ಮಾತನಾಡಿ,ಶೂದ್ರರು ಆಸ್ತಿ, ಮನೆ ಮಾರಿ ಜಾತ್ರೆ ಮಾಡುತ್ತಾರೆ,ಆದರೆ ಇನ್ನೊಬ್ಬರು ಜಾತ್ರೆ ಮಾಡಿಸಿ ಮನೆ ಕಟ್ಟಿಕೊಳ್ಳುತ್ತಾರೆ, ಹಾಗಾಗಿ ದೇವರ,ಧರ್ಮದ ಹೆಸರಿನಲ್ಲಿ ಹಗಲು ದರೋಡೆ ನಡೆಯುತ್ತದೆ ಎಂದರು.

ಜನರು ಇಂದು ಹಣದ ಮೇಲೆ ವಿವಿಧ ರೀತಿಯ ದೇವರ ದರ್ಶನ ಪಡೆಯುತ್ತಿದ್ದಾರೆ. ದೇವರಗಳನ್ನು ಇಂದು ಬೀದಿಗೆ ತಂದು ನಿಲ್ಲಿಸಿದ್ದೇವೆ ಹಾಗಾಗಿ ಅಂಬೇಡ್ಕರ್ ಬುದ್ಧ ಬಸವಣ್ಣ ಅವರ ಅನುಯಾಯಿಗಳು ಆಗಿದ್ದರೆ. ಹೋಮ ಹವನಗಳಿಗೆ ಮಾರು ಹೋಗಬೇಡಿ ಎಷ್ಟೋ ಜನರಿಗೆ ಮನೆಯೇ ಇಲ್ಲ ಇನ್ನು ವಾಸ್ತವ ಎಲ್ಲಿದೆ ಎಂದು ಮನವರಿಕೆ ಮಾಡಿಕೊಟ್ಟರು.ಸಾಮಾಜಿಕ ಜಾಲತಾಣದಿಂದ ನಮ್ಮ ಮಕ್ಕಳು ತಪ್ಪು ದಾರಿಗೆ ಹೋಗುತ್ತಿದ್ದಾರೆ. ಆದ್ದರಿಂದ ಮಕ್ಕಳ ಕೈಗೆ ಮೊಬೈಲ್ ಕೊಡಬೇಡಿ ಎಂದು ಸಲಹೆ ನೀಡಿದರು.ದೇಶದಲ್ಲಿ ವಿದ್ಯಾವಂತರ ಕೊರತೆ ಇಲ್ಲ ಪ್ರಜ್ಞಾವಂತರ ಕೊರತೆ ಇದೆ. ಧರ್ಮ ಎನ್ನುವುದು ಮಾರುಕಟ್ಟೆಯ ಸರಕು ಆಗಬಾರದು,ಪಂಚಾಂಗ,ಜಾತಕ,ತಂತ್ರ, ಮಂತ್ರ,ಇವೆಲ್ಲ ಬದಿಗೆ ಇಟ್ಟು ಪಂಚ ಅಂಗಗಳ ಬಗ್ಗೆ ಗಮನಕೊಡಬೇಕು,ಮನೆಯ ವಾಸ್ತವ ಬಿಟ್ಟುಬಿಡಿ ಮನಸ್ಸಿನ ವಾಸ್ತವದ ಕಡೆ ಗಮನ ಕೊಡಿ ಆಗ ಬದುಕು ಹಸನಾಗುತ್ತದೆ. ಸಮಾಧಾನಕ್ಕಾಗಿ ,ನೆಮ್ಮದಿಗಾಗಿ ಮನಸ್ಸು ಮನಸ್ಸುಗಳನ್ನು ಒಂದುಗೂಡಿಸುವ ದೇವರು ಬೇಕು ವಿನಹ, ದೇವರ ಹೆಸರಿನಲ್ಲಿ ಬದುಕುತ್ತಿರುವ ಸಮಾಜಘಾತಕರಲ್ಲ. ವಿದ್ಯಾಭ್ಯಾಸ ಮಾಡಿ ಉದ್ಯೋಗ ಪಡೆಯಲು ಸುಮಾರು ವರ್ಷಗಳ ಕಾಲ ಓದಬೇಕು, ಕೆಲವರು ಬಟ್ಟೆ ಬದಲಾಯಿಸಿದರೆ ಸಾಕು ಜೀವನ ಕಟ್ಟಿಕೊಳ್ಳುತ್ತಿದ್ದಾರೆ, ಇಂತಹ ಸಮಾಜಘಾತಕರ ವಿರುದ್ಧ ಹೋರಾಡಬೇಕಿದೆ ಎಲ್ಲಾ ಧರ್ಮದವರನ್ನು ಪ್ರೀತಿಸಬೇಕು ಆಗ ಮಾತ್ರ ಸಮಾಜದಲ್ಲಿ ನೆಮ್ಮದಿಯಿಂದಬದುಕಲುಸಾಧ್ಯವಾಗುತ್ತದೆ, ಬುದ್ಧ ಅಂಬೇಡ್ಕರ್ ಬಸವಣ್ಣ ಅವರ ಸಿದ್ಧಾಂತಗಳನ್ನು ಮೈಗೂಡಿಸಿಕೊಳ್ಳಬೇಕು ಎಂದು ಹೇಳಿದರು.ರಾಜ್ಯೋತ್ಸವ ಪ್ರಶಸ್ತಿ ಪಡೆದ ಡಾ. ಟಿ ದಿಲೀಪ್ ಕುಮಾರ್, ಡಾ. ವಿ. ಕಮಲಮ್ಮ, ಹುಲಿಕಲ್ ನಟರಾಜ್,ಟಿ.ಸೋಮೇಶ, ಅವರನ್ನು ಸನ್ಮಾನಿಸಲಾಯಿತುಕಾರ್ಯಕ್ರಮದಲ್ಲಿ ಹಾವೇರಿ ಭೋವಿ ಜನಾಂಗದ ಜಿಲ್ಲಾಧ್ಯಕ್ಷ ರವಿ ಪೂಜಾರಿ, ಚಿತ್ರದುರ್ಗ ಭೋವಿ ಜನಾಂಗದ ಜಿಲ್ಲಾ ಅಧ್ಯಕ್ಷ ತಿಪ್ಪೇಸ್ವಾಮಿ, ದಾವಣಗೆರೆ ಮಾಜಿ ರೇಷ್ಮೆ ಮಂಡಳಿ ಅಧ್ಯಕ್ಷಬಸವರಾಜ್, ಭೀಮಪ್ಪ, ಮೋಹನ್, ತಿಮ್ಮಣ್ಣ, ಭೋವಿಗುರುಪೀಠದ ಸಿಇಒ ಗೌನಹಳ್ಳಿ ಗೋವಿಂದಪ್ಪ ಸೇರಿದಂತೆ ಭೋವಿ ಸಮಾಜದ ಮುಖಂಡರು ಇದ್ದರು

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T